BV
ಕನ್ನಡ ದಿನಪತ್ರಿಕೆ
20 ಎಪ್ರಿಲ್ । ಶನಿವಾರ
20 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 54 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

# ಮುದ್ದು ಮಗಳಿಗೆ ಪೋಷಕರ ಕಣ್ಣೀರ ವಿದಾಯ



ಬೆಳಗಾವಿ: ಪ್ರೀತಿಸಲು ನಿರಾಕರಿಸಿದಳು ಎಂಬ ಕಾರಣಕ್ಕಾಗಿ ಪಾಗಲ್ ಪ್ರೇಮಿ ಫಯಾಜ್ ಎಂಬಾತ ಕಾರ್ಪೋರೇಟರ್ ಮಗಳನ್ನು ಭೀಕರವಾಗಿ ಕೊಲೆ ಮಾಡಿದ್ದ. ಹುಬ್ಬಳ್ಳಿಯಲ್ಲಿ ಕಾಲೇಜು ವಿದ್ಯಾರ್ಥಿನಿ ನೇಹಾ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಾದ್ಯಂತ ಪ್ರತಿಭಟನೆಗಳು ನಡೆದವು. ಪ್ರತಿಭಟನಾಕಾರರಿಂದ ದುಃಖ, ಆಕ್ರೋಶ ಎಲ್ಲವೂ ಒಟ್ಟೊಟ್ಟಿಗೆ ಬಂದಿತ್ತು. ನೇಹಾಳನ್ನು ಕೊಂದ ಆರೋಪಿ ಫಯಾಜ್ ವಿರುದ್ಧ ಶೂಟೌಟ್ ಆರ್ಡರ್ ಮಾಡಿ, ಎನ್‌ಕೌಂಟರ್ ಮಾಡಿ ಬಿಸಾಕಿ ಎಂದು ಪ್ರತಿಭಟನಾಕಾರರು ಆಕ್ರೋಶ ಹೊರಹಾಕಿದರು.

ರಸ್ತೆ ತಡೆದು ಆಕ್ರೋಶ: ನೇಹಾ ಹತ್ಯೆ ಖಂಡಿಸಿ ರಾಜ್ಯಾದ್ಯಂತ ಪ್ರತಿಭಟನೆಗಳು ನಡೆದವು. ಬೆಳಗಾವಿಯ ಸವದತ್ತಿ ತಾಲೂಕಿನ ಮುನವಳ್ಳಿ ಪಟ್ಟಣದಲ್ಲಿ ಸಂಕೇಶ್ವರ–ಸವದತ್ತಿ ಹೆದ್ದಾರಿ ತಡೆದು ಬಿಜೆಪಿ ಹಾಗೂ ಹಿಂದೂಪರ ಸಂಘಟನೆಗಳಿಂದ ಪ್ರತಿಭಟನೆ ನಡೆಸಿದರು. ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಜೆಡಿಎಸ್ ನಾಯಕ ಸೌರಬ್ ಛೋಪ್ರಾ ವಿರೂಪಾಕ್ಷ ಮಾಮನಿ ಸೇರಿ ನೂರಾರು ಕಾರ್ಯಕರ್ತರು ಭಾಗಿಯಾಗಿದ್ದರು.

ಮುದ್ದು ಮಗಳಿಗೆ ಕಣ್ಣೀರ ವಿದಾಯ: ಬಸವ ನಗರದಿಂದ ನಗರದ ಪ್ರಮುಖ ರಸ್ತೆಗಳಲ್ಲಿ ಅಂತಿಮ ಯಾತ್ರೆ ಮೂಲಕ ಮಂಟೂರು ರಸ್ತೆಯಲ್ಲಿರುವ ಸ್ಮಶಾನಕ್ಕೆ ಪಾರ್ಥಿವ ಶರೀರ ತರಲಾಯಿತು. ವೀರಶೈವ ಲಿಂಗಾಯತ ರುದ್ರಭೂಮಿಯಲ್ಲಿ ಅಂತಿಮ ವಿಧಿವಿಧಾನದ ಮೂಲಕ ಅಂತ್ಯಕ್ರಿಯೆ ನೆರವೇರಿಸಲಾಯಿತು. ಹುಬ್ಬಳ್ಳಿಯ ಬಿವಿಬಿ ಕಾಲೇಜಿನಲ್ಲಿ ಎಂಸಿಎ ಪ್ರಥಮ ವರ್ಷದಲ್ಲಿ ಓದುತ್ತಿದ್ದ ನೇಹಾ ತನ್ನ ಸಹಪಾಠಿ ಫಯಾಜ್‌ನಿಂದಲೇ ಹತ್ಯೆಗಿಡಾಗಿದ್ದಳು. ವೀರಶೈವ ಜಂಗಮ ವಿಧಿವಿಧಾನಗಳಂತೆ ನೇಹಾ ಹಿರೇಮಠ ಅಂತ್ಯಕ್ರಿಯೆಯನ್ನು ಕುಟುಂಬಸ್ಥರು ನೆರವೇರಿಸಿದ್ದಾರೆ.

ಮನೆ ಖಾಲಿ ಮಾಡಿದ ಆರೋಪಿ ಕುಟುಂಬಸ್ಥರು: ಹುಬ್ಬಳ್ಳಿಯಲ್ಲಿ

## ವಿದ್ಯಾರ್ಥಿನಿಯ ಹತ್ಯೆ ಮಾಡಿದ ಸವದತ್ತಿ ಮೂಲದ ಆರೋಪಿ ಬಂಧನ




ಹುಬ್ಬಳ್ಳಿ: ಕಾಲೇಜಿನಲ್ಲಿಯೇ ಕಾರ್ಪೊರೇಟರ್ ಮಗಳನ್ನು ಬರ್ಬರವಾಗಿ ಹತ್ಯೆ ಮಾಡಿದ್ದ ಪಾತಕಿಗೆ ಹುಬ್ಬಳ್ಳಿ ಕೋರ್ಟ್ ನ್ಯಾಯಾಂಗ ಬಂಧನ ವಿಧಿಸಿದೆ.

ಹುಬ್ಬಳ್ಳಿಯ ಬಿವಿಬಿ ಕಾಲೇಜಿನಲ್ಲಿ ಏಪ್ರಿಲ್ 18ರಂದು ನೇಹಾ ಹಿರೇಮಠ ಎಂಬ ವಿದ್ಯಾರ್ಥಿನಿಯನ್ನು ಅದೇ ಕಾಲೇಜಿನಲ್ಲಿ ಓದುತಿದ್ದ ಫಯಾಜ್ ಎಂಬಾತ 12 ಬಾರಿ ಚಾಕುವಿನಿಂದ ಇರಿದು ಬರ್ಬರವಾಗಿ ಹತ್ಯೆ ಮಾಡಿದ್ದ. ಆರೋಪಿ ಫಯಾಜ್ ಮೂಲತಃ ಸವದತ್ತಿ ತಾಲೂಕಿನ ಮುನವಳ್ಳಿ ನಿವಾಸಿ. ತಂದೆ ಬಾಬಾಸಾಬ್, ತಾಯಿ ಮುಮ್ತಾಜ್ ಇಬ್ಬರೂ ಸರ್ಕಾರಿ ಶಾಲೆಯ ಶಿಕ್ಷಕರು.


ಕೊಲೆ ಬಳಿಕ ಚಾಕುವನ್ನು ಅಲ್ಲೇ ಬಿಸಾಕಿ ಎಸ್ಕೇಪ್ ಆಗಲು ಯತ್ನಿಸಿದ್ದ ಆರೋಪಿಯನ್ನು ಹುಬ್ಬಳ್ಳಿ ವಿದ್ಯಾನಗರ ಪೊಲೀಸರು ಬಂಧಿಸಿದ್ದರು. ಬಂಧಿತ ಆರೋಪಿ ಫಯಾಜ್ ನನ್ನು ಇಂದು ನ್ಯಾಯಾಲಯಕ್ಕೆ ಹಾಜರು ಪಡಿಸಲಾಗಿದೆ. ಈ ವೇಳೆ ನ್ಯಾಯಾಲಯ ಆರೋಪಿಯನ್ನು 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶ ಹೊರಡಿಸಿದೆ.

## ಮಗಳನ್ನ ಒಂದ ಸಲ ಮಾತಾಡಿಸಿ ಬುದ್ದಿ: ಕಣ್ಣೀರಿಟ್ಟ ನೇಹಾ ತಂದೆ



ಹುಬ್ಬಳ್ಳಿ: ಕಾಲೇಜು ಕ್ಯಾಂಪಸ್‌ನಲ್ಲಿ ಕಾರ್ಪೊರೇಟರ್ ಮಗಳು ನೇಹಾ ಹಿರೇಮಠ್ ಅವರ ಬರ್ಬರ ಹತ್ಯೆಯಾಗಿದ್ದು, ಹುಬ್ಬಳ್ಳಿಯಲ್ಲಿ ಆಕ್ರೋಶದ ಕಟ್ಟೆ ಹೊಡೆದಿದೆ. ನೇಹಾ ಹಿರೇಮಠ್ ಅವರ ಅಂತಿಮ ಯಾತ್ರೆಯಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ನೇಹಾ ಅವರ ಅಂತಿಮ ದರ್ಶನಕ್ಕೆ ಮೂರು ಸಾವಿರ ಮಠದ ಸ್ವಾಮೀಜಿ ಆಗಮಿಸಿ ಸಾಂತ್ವನ ಹೇಳಿದರು. ಮೂರು ಸಾವಿರ ಮಠದ ಗುರು ಸಿದ್ದರಾಜಯೋಗಿಂದ್ರ ಸ್ವಾಮೀಜಿಗಳ ಎದುರು ಕುಟುಂಬಸ್ಥರು ಕಣ್ಣೀರಿಟ್ಟಿದ್ದಾರೆ

## ಆರೋಪಿಯನ್ನು ಎನ್‌ಕೌಂಟರ್ ಮಾಡಿ: ಮುತಾಲಿಕ್ ಆಗ್ರಹ



ಹುಬ್ಬಳ್ಳಿ: ವಿದ್ಯಾರ್ಥಿನಿಯರ ಬಗ್ಗೆ ರಾಜ್ಯ ಸರ್ಕಾರಕ್ಕೆ ಕಳಕಳಿಯಿದ್ದರೆ, ನೇಹಾ ಕೊಲೆ ಪ್ರಕರಣದ ಆರೋಪಿಯನ್ನು ಎನ್'ಕೌಂಟರ್ ಮಾಡಲು ಆದೇಶ ಹೊರಡಿಸಬೇಕು. ಅವರ ಮನೆಯನ್ನು ಬುಡ್ಲೋಜರ್ ಹಚ್ಚಿ ನೆಲಸಮ ಮಾಡಬೇಕು ಎಂದು ಶ್ರೀರಾಮಸೇನಾ ಸಂಸ್ಥಾಪಕ ಅಧ್ಯಕ್ಷ ಪ್ರಮೋದ ಮುತಾಲಿಕ್ ಆಗ್ರಹಿಸಿದರು.

## ಎನ್‌ಕೌಂಟರ್ ಕಾನೂನು ಜಾರಿಗೆ ಬರಲೇಬೇಕು: ಸಚಿವ ಸಂತೋಷ್ ಲಾಡ್



ಹುಬ್ಬಳ್ಳಿ: ಬಿವಿಬಿ ಕಾಲೇಜು ವಿದ್ಯಾರ್ಥಿನಿ ನೇಹಾ ಬರ್ಬರ ಕೊಲೆ ಪ್ರಕರಣ ದುರದೃಷ್ಟಕರ. ಈ ಪ್ರಕರಣ ಖಂಡನೀಯ. ಎನ್ಕೌಂಟ–ರ್ ಕಾನೂನು ತರಬೇಕಾದ ಅಗತ್ಯವಿದೆ ಎಂದು ಇಲ್ಲಿನ ಕಿಮ್ಸ್ ಶವಗಾರಕ್ಕೆ ಭೇಟಿ ನೀಡಿದ ನಂತರ ಸಚಿವ ಸಂತೋಷ್ಲಾಡ್ ಹೇಳಿದರು.

ನೇಹಾ ಹಿರೇಮಠ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುನವಳ್ಳಿಯಲ್ಲಿ ಬಿಜೆಪಿ ಪ್ರತಿಭಟನೆ ನಡೆಸಿತು. ಇತ್ತ ಮುಂಜಾಗ್ರತಾ ಕ್ರಮವಾಗಿ ಬೆಳಗಾವಿಯ ಮುನವಳ್ಳಿಯ ಸಾಯಿನಗರದಲ್ಲಿರುವ ಆರೋಪಿ ಫಯಾಜ್ ಮನೆಗೆ ಬಿಗಿ ಭದ್ರತೆ ವಹಿಸಲಾಗಿ–ತ್ತು. ಪೊಲೀಸರ ಸೂಚನೆ ಮೇರೆಗೆ ಮನೆ ಖಾಲಿ ಮಾಡಿ ಫಯಾಜ್ ಕುಟುಂಬಸ್ಥರು ಸಂಬಂಧಿಕರ ಮನೆಗೆ ತೆರಳಿದರು. ಆರೋಪಿಯ ಮನೆಯ ಬಳಿ ಓರ್ವ ಎಎಸ್‌ಐ, ಪೇದೆ ನೇಮಕ ಮಾಡಲಾಗಿತ್ತು.

## ಲೋಕಸಭೆ ಚುನಾವಣೆ ಕಣದಿಂದ ಹಿಂದೆ ಸರಿದ ಸ್ವಾಮೀಜಿ



ಬೆಳಗಾವಿ: ಉತ್ತರ ಕನ್ನಡ ಲೋಕಸಭಾ ಚುನಾವಣೆಗೆ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧೆಗೆ ಅಣಿಯಾಗಿದ್ದ ಸ್ವಾಮೀಜಿ ಇದೀಗ ಕಣದಿಂದ ಹಿಂದೆ ಸರಿದಿದ್ದಾರೆ.

ಉ.ಕ.ಮತಕ್ಷೇತ್ರದ ಚುನಾವಣೆಗೆ ಪಕ್ಷೇತರ ಅಭ್ಯಥಿ 9ಯಾಗಿ ಸ್ಪರ್ಧಿಸಬೇಕೆಂದಿದ್ದ ಮಡಿವಾಳೇಶ್ವರ ಮಠದ ವೀರೇಶ್ವರ ಸ್ವಾಮೀಜಿ ತಮ್ಮ ನಿರ್ಧಾರದಿಂದ ಹಿಂದೆ ಸರಿದಿದ್ದಾರೆ. ಕಿತ್ತೂರು ತಾಲೂಕಿನ ದೇಗುಲಹಳ್ಳಿ ಗ್ರಾಮದ ಮಡಿವಾಳೇಶ್ವರ ಮಠದ ಸ್ವಾಮೀಜಿ ಸುದ್ದಿಗಾರರೊಂದಿಗೆ ಮಾತನಾಡಿ, ಸಮಾಜ ಸೇವೆ ಮಾಡಲು ಇಚ್ಛಿಸಿ ನಾಮಪತ್ರ ಸಲ್ಲಿಸುವ ತಯಾರಿಯಲ್ಲಿದೆ. ಆದರೆ, ಭಕ್ತರು ಲೋಕಸಭೆ ಕ್ಷೇತ್ರದ ವ್ಯಾಪ್ತಿ ಅಪಾರವಾಗಿದೆ. ನಿಗದಿತ ಸಮಯದಲ್ಲಿ ಎಲ್ಲಾ ಮತದಾರರನ್ನು ಸಂಪರ್ಕಿಸಲು ಸಾಧ್ಯವಾಗುವುದಿಲ್ಲ ಹಾಗೂ ಭಕ್ತರಿಂದ ವಿಭಿನ್ನ ಅಭಿಪ್ರಾಯ ವ್ಯಕ್ತವಾದ ಹಿನ್ನೆಲೆಯಲ್ಲಿ ಅವರ ಆಸೆಯಂತೆ ಚುನಾವಣೆಗೆ ಸ್ಪರ್ಧಿಸುವ ವಿಚಾರದಿಂದ ಹಿಂದೆ ಸರಿದಿದ್ದೇನೆ ಎಂದು ಹೇಳಿದ್ದಾರೆ.

## ರೈಲಿಗೆ ಸಿಲುಕಿ ಖಾಸಗಿ ಆಸ್ಪತ್ರೆ ಶುಶ್ರೂಷಕ ಆತ್ಮಹತ್ಯೆಗೆ ಶರಣು

ಬೆಂಗಳೂರು: ಖಾಸಗಿ ಆಸ್ಪತ್ರೆಯ ಶುಶ್ರೂಷಕನೊಬ್ಬ ರೈಲಿಗೆ ಸಿಲುಕಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ದೀಪಾಂಜಲಿ ನಗರದ ಸಮೀಪ ನಡೆದಿದೆ.

ಮಾಗಡಿ ರಸ್ತೆಯ ಚೋಳರಪಾಳ್ಯದ ನಿವಾಸಿ ಚನ್ನಬಸು ಅಶೋಕ್ (22) ಮೃತ ದುರ್ದೈವಿ. ದೀಪಾಂಜಲಿ ನಗರದ ಸಮೀಪ ರೈಲಿಗೆ ಬುಧವಾರ ರಾತ್ರಿ ಸಿಲುಕಿ ಚನ್ನಬಸು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ರೈಲ್ವೆ ಹಳಿಗಳ ಬಳಿ ಅಪರಿಚಿತ ಮೃತದೇಹ ಕಂಡು ಪೊಲೀಸರಿಗೆ ಸಾರ್ವಜನಿಕರು ಗುರುವಾರ ಮಾಹಿತಿ ನೀಡಿದ್ದಾರೆ. ಘಟನಾ ಸ್ಥಳಕ್ಕೆ ತೆರಳಿ ಪೊಲೀಸರು ಪರಿಶೀಲನೆ ನಡೆಸಿದಾಗ ಮೃತದೇಹದ ಗುರುತು ಪತ್ತೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ವಿಜಯಪುರ ಜಿಲ್ಲೆ ಕಾರಜೋಳದ ಮೃತ ಅಶೋಕ್, ಕಳೆದ 15 ದಿನಗಳಿಂದ ಖಾಸಗಿ ಆಸ್ಪತ್ರೆಯಲ್ಲಿ ಶುಶ್ರೂಷಕನಾಗಿ ಕೆಲಸ ಮಾಡುತ್ತಿದ್ದ. ತಮ್ಮ ಚಿಕ್ಕಮ್ಮನ ಮನೆಯಲ್ಲಿ ನೆಲೆಸಿದ್ದ ಈತ, ಬುಧವಾರ ರಾತ್ರಿ ಕೆಲಸ ಮುಗಿಸಿ ಮರಳುವಾಗ ದೀಪಾಂಜಲಿನಗರದ ಬಳಿ ಆತ್ಮಹತ್ಯೆಗೆ ಶರಣಾಗಿದ್ದಾನೆ.

## ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ; 20 ಅಭ್ಯರ್ಥಿಗಳಿಂದ 27 ನಾಮಪತ್ರ ಸಲ್ಲಿಕೆ

ಬೆಳಗಾವಿ: ಲೋಕಸಭಾ ಸಾರ್ವತ್ರಿಕ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಎ.12 ರಿಂದ 19 ರ ವರೆಗೆ 20 ಅಭ್ಯರ್ಥಿಗಳಿಂದ 27 ಉಮೇದುವಾರಿಕೆಗಳು ಸ್ವೀಕೃತವಾಗಿರುತ್ತವೆ.

ನಾಮಪತ್ರ ಸಲ್ಲಿಸಿದವರ ವಿವರ: ಭಾರತೀಯ ಜನತಾ ಪಾರ್ಟಿಯಿಂದ ಅಣ್ಣಾಸಾಹೇಬ.ಎಸ್.ಜೊಲ್ಲೆ–2, ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ–4, ಅಖಿಲ ಭಾರತ ಹಿಂದೂ ಮಹಾಸಭಾ ಪಕ್ಷದಿಂದ ಕಾಡಯ್ಯ ಶಂಕರಯ್ಯ ಹಿರೇಮಠ–1,

ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದಿಂದ ಕುಮಾರ ಡೊಂಗರೆ–1, ಸರ್ವ ಜನತಾ ಪಾರ್ಟಿ ಪಕ್ಷದಿಂದ ಅಪ್ಪಾಸಾಹೇಬ ಕುರಣೆ–2,ಬಹುಜನ ಭಾರತ ಪಾರ್ಟಿಯಿಂದ ಪವನಕುಮಾರ ಬಾಬುರಾವ ಮಾಳಗೆ–1, ಭಾರತೀಯ ಜವಾನ ಕಿಸಾನ ಪಾರ್ಟಿಯಿಂದ ಸತ್ಯಪ್ಪ ದಶರಥ ಕಾಳೇಲಿ–1,

**ಪಕ್ಷೇತರ ಅಭ್ಯರ್ಥಿಗಳಾಗಿ**

ಜಿತೇಂದ್ರ ಸುಭಾಷ ನೇರ್ಲೆ–1, ಕಾಶಿನಾಥ ಕುರಣಿ–1, ಮಹೇಶ ಅಶೋಕ–1, ಗಜಾನನ ಪೂಜಾರಿ–2,ಭೀಮಸೇನ ಸನದಿ–1, ಸಮ್ಮೇದ ಸರದಾರ ವರ್ಧಮಾನೆ–1, ವಿಲಾಸ ಮಣ್ಣೂರ–1, ಶಂಭು ಕಲ್ಲೋಳಿಕರ–2,ಮೋಹನ ಮೊಟನ್ನವರ–1, ಮಗದುಮ ಇಸ್ಮಾಯಿಲ್ ಮಗದುಮ–1,ಶ್ರೀಣಿಕ ಅಣ್ಣಾಸಾಹೇಬ ಜಂಗಟೆ–1,ರಾಜು ವಿಜಯ ಸೊಲ್ಲಾಪುರೆ–1,ಯಾಸೀನ ಸಿರಾಜುದ್ದಿನ ಪಟಕಿ–1 ಅವರುಗಳು ಉಮೇದುವಾರಿಕೆಯನ್ನು ಸಲ್ಲಸಿರುತ್ತಾರೆ.

ಎ. 20 ರಂದು ನಾಮಪತ್ರಗಳ ಪರಿಶೀಲನೆ ಜರುಗಲಿದ್ದು, ಎ. 22 ರಂದು ಮಧ್ಯಾಹ್ನ 3 ಗಂಟೆಯೊಳಗಾಗಿ ನಾಮಪತ್ರಗಳನ್ನು ಹಿಂಪಡೆಯಬಹುದಾಗಿರುತ್ತದೆ ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿರುತ್ತಾರೆ.

## ಹಣ ಸಾಗಾಟ : ಬೆಂಗಳೂರು, ಧಾರವಾಡ ಉದ್ಯಮಿಗಳಿಗೆ ಐಟಿ ಶಾಕ್



ಬೆಂಗಳೂರು: ಕರ್ನಾಟಕದಲ್ಲಿ ಲೋಕಸಭೆ ಚುನಾವಣೆ ಮೊದಲ ಹಂತದ ಮತದಾನಕ್ಕೆ ಕೆಲವೇ ದಿನಗಳಿರುವಾಗ ಬೆಂಗಳೂರಿನಲ್ಲಿ ಐಟಿ ದಾಳಿ ನಡೆದಿದೆ. ನಗರದ ಹತ್ತಕ್ಕೂ ಹೆಚ್ಚು ಕಡೆ ಶುಕ್ರವಾರ ಬೆಳಗ್ಗೆ ಐಟಿ ಅಧಿಕಾರಿಗಳು ಉದ್ಯಮಿಗಳ ಮನೆ ಮೇಲೆ ದಾಳಿ ನಡೆಸಿ ದಾಖಲೆ ಪರಿಶೀಲನೆ ನಡೆಸಿದ್ದಾರೆ. ಚುನಾವಣೆಗೆ ಹಣ ಸಾಗಾಟ ಆರೋಪ ಹಿನ್ನೆಲೆಯಲ್ಲಿ ದಾಳಿ ಮಾಡಿರುವ ಸಾಧ್ಯತೆ ಇದೆ.

ಕಾಂಗ್ರೆಸ್ ಪಕ್ಷದ ಜತೆ ಗುರುತಿಸಿಕೊಂಡಿದ್ದ ರಿಯಲ್ ಎಸ್ಟೇಟ್ ಉದ್ಯಮಿ ಮನೆ ಮೇಲೆ ಐಟಿ ಅಧಿಕಾರಿಗಳು ನೆಲಮಂಗಲದಲ್ಲಿ ಕೆಲವು ದಿನಗಳ ಹಿಂದೆ ದಾಳಿ ಮಾಡಿದ್ದರು. 6 ಕಾರುಗಳಲ್ಲಿ ಬಂದ 20 ಐಟಿ ಅಧಿಕಾರಿಗಳ ತಂಡ ಶೋಧ ಕಾರ್ಯ ನಡೆಸಿತ್ತು.

ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಸಂಸದ ಡಿಕೆ ಸುರೇಶ್ ಆಪ್ತ ಕನಕಪುರ ಕೆಂಪರಾಜು ಮನೆ ಮೇಲೆ ಕೂಡ ಕೆಲವು ದಿನಗಳ ಹಿಂದೆ ಐಟಿ ಅಧಿಕಾ–ರಿಗಳು ದಾಳಿ ಮಾಡಿದ್ದರು. ಡಿಕೆ ಸುರೇಶ್ ಅವರ ಮತ್ತೊಬ್ಬ ಆಪ್ತನ ಮನೆ ಮೇಲೆ ಬೆಂಗಳೂರಿನ ವಾಜರಹಳ್ಳಿಯಲ್ಲಿ ಐಟಿ ದಾಳಿ ನಡೆದಿತ್ತು.

ಧಾರವಾಡದ ದಾಸನಕೊಪ್ಪ ಕ್ರಾಸ್ ಬಳಿಯ ಅರ್ನಾ ರೆಸಿಡೆನ್ಸಿಯ ಮೂರನೇ ಮಹಡಿಯಲ್ಲಿರುವ ಬಸವರಾಜ್ ದತ್ತನವರ್ ಎನ್ನುವರ ಪ್ಲಾಟ್ ನಂ 303ರ ನಿವಾಸದ ಮೇಲೆ ಮಂಗಳವಾರ ದಾಳಿ ನಡೆಸಿದ್ದ ಐಟಿ ಅಧಿಕಾರಿಗಳು, ಬರೋಬ್ಬರಿ 18 ಕೋಟಿ ರೂ. ನಗದು ವಶಕ್ಕೆ ಪಡೆದುಕೊಂಡಿದ್ದರು.

## ಭಾರತೀಯ ನೌಕಾಪಡೆಯ ನೂತನ ಮುಖ್ಯಸ್ಥರಾಗಿ ದಿನೇಶ್ ತ್ರಿಪಾಠಿ ನೇಮಕ



ನವದೆಹಲಿ: ಭಾರತೀಯ ನೌಕಾಪಡೆಯ ಮುಂದಿನ ಮುಖ್ಯಸ್ಥರಾಗಿ ವೈಸ್ ಅಡ್ಮಿರಲ್ ದಿನೇಶ್ ತ್ರಿಪಾಠಿ ಅವರನ್ನು ಸರ್ಕಾರ ನೇಮಿಸಿದೆ.


ತ್ರಿಪಾಠಿ ಅವರು ತಮ್ಮ ಸುಮಾರು 40 ವರ್ಷಗಳ ಸುದೀರ್ಘ ವೃತ್ತಿಜೀವನದಲ್ಲಿ ಅನೇಕ ಪ್ರಮುಖ ಹುದ್ದೆಗಳಲ್ಲಿ ಕೆಲಸ ಮಾಡಿದ ನಂತರ ಪ್ರಸ್ತುತ ನೌಕಾಪಡೆಯ ಸಿಬ್ಬಂದಿಯ ಉಪಾಧ್ಯಕ್ಷರಾಗಿದ್ದಾರೆ ಮತ್ತು ಅವರು ಏಪ್ರಿಲ್ 30 ರಂದು ತಮ್ಮ ಹೊಸ ಅಧಿಕಾರವನ್ನು ವಹಿಸಿಕೊಳ್ಳಲಿದ್ದಾರೆ.

ನೌಕಾಪಡೆಯ ಉಪ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಳ್ಳುವ ಮೊದಲು, ವಿಎಡಿಎಂ ದಿನೇಶ್ ಕೆ ತ್ರಿಪಾಠಿ ಅವರು ಪಶ್ಚಿಮ ನೌಕಾ ಕಮಾಂಡ್ನ ಫ್ಲ್ಯಾಗ್ ಆಫೀಸರ್ ಕಮಾಂಡಿಂಗ್–ಇನ್–ಚೀಫ್ ಆಗಿ ಸೇವೆ ಸಲ್ಲಿಸಿದ್ದರು.

ಸೈನಿಕ್ ಸ್ಕೂಲ್ ರೇವಾ ಮತ್ತು ಖಡಕ್ವಾಸ್ಲಾದ ರಾಷ್ಟ್ರೀಯ ರಕ್ಷಣಾ ಅಕಾಡೆಮಿಯ ಹಳೆಯ ವಿದ್ಯಾರ್ಥಿಯಾದ ಅವರನ್ನು ಜುಲೈ 1, 1985 ರಂದು ಭಾರತೀಯ ನೌಕಾಪಡೆಗೆ ನಿಯೋಜಿಸಲಾಯಿತು. ಸಂವಹನ ಮತ್ತು ಎಲೆಕ್ಟ್ರಾನಿಕ್ ಯುದ್ಧ ತಜ್ಞರಾದ ಅವರು ನೌಕಾಪಡೆಯ ಮುಂಚೂಣಿ ಯುದ್ಧನೌಕೆಗಳಲ್ಲಿ ಸಿಗ್ನಲ್ ಸಂವಹನ ಅಧಿಕಾರಿ ಮತ್ತು ಎಲೆಕ್ಟ್ರಾನಿಕ್ ಯುದ್ಧ ಅಧಿಕಾರಿಯಾಗಿ ಮತ್ತು ನಂತರ ಮಾರ್ಗದರ್ಶಿ ಕ್ಷಿಪಣಿ ನಾಶಕ ಐಎನ್‌ಎಸ್ ಮುಂಬೈನ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಪ್ರಧಾನ ಯುದ್ಧ ಅಧಿಕಾರಿಯಾಗಿ ಸೇವೆ ಸಲ್ಲಿಸಿದರು. ಅವರು ಭಾರತೀಯ ನೌಕಾ ಹಡಗುಗಳಾದ ವಿನಾಶ್, ಕಿರ್ಚ್ ಮತ್ತು ತ್ರಿಶೂಲ್ ಅನ್ನು ಮುನ್ನಡೆಸಿದರು.

ಅವರು ಮುಂಬೈನಲ್ಲಿ ವೆಸ್ಟರ್ನ್ ಫ್ಲೀಟ್ನ ಫ್ಲೀಟ್ ಆಪರೇಶನ್ಸ್ ಆಫೀಸರ್, ನೌಕಾ ಕಾರ್ಯಾಚರಣೆಗಳ ನಿರ್ದೇಶಕರು, ನೆಟ್ವರ್ಕ್ ಕೇಂದ್ರಿತ ಕಾರ್ಯಾಚರಣೆಗಳ ಪ್ರಧಾನ ನಿರ್ದೇಶಕರು ಮತ್ತು ನವದೆಹಲಿಯಲ್ಲಿ ನೌಕಾ ಯೋಜನೆಗಳ ಪ್ರಧಾನ ನಿರ್ದೇಶಕರು ಸೇ–ರಿದಂತೆ ವಿವಿಧ ಪ್ರಮುಖ ಕಾರ್ಯಾಚರಣೆ ಮತ್ತು ಸಿಬ್ಬಂದಿ ನೇಮಕಾತಿಗಳನ್ನು ನಿರ್ವಹಿಸಿದ್ದಾರೆ. ರಿಯರ್ ಅಡ್ಮಿರಲ್ ಹುದ್ದೆಗೆ ಬಡ್ತಿ ಪಡೆದ ನಂತರ, ಅವರು ಎನ್‌ಎಚ್ಕ್ಯೂನಲ್ಲಿ ನೌಕಾ ಸಿಬ್ಬಂದಿಯ ಸಹಾಯಕ ಮುಖ್ಯಸ್ಥರಾಗಿ ಸೇವೆ ಸಲ್ಲಿಸಿದರು.

# ಬೆಳಗಾವಿಯ ಅಭಿವೃದ್ಧಿಗೆ ಶೆಟ್ಟರ ಆಯ್ಕೆ ಅಗತ್ಯ: ಡಾ.ಪ್ರಭಾಕರ ಕೋರೆ



ಬೆಳಗಾವಿ: ಭಾರತವನ್ನು ಜಗತ್ತು ನೋಡುವಂತೆ ಮಾಡಿದ್ದರೆ. ಅದು ಪ್ರಧಾನಿ ನರೇಂದ್ರ ಮೋದಿಜಿಯವರು. ಅವರ ದಿಟ್ಟ ಹಾಗೂ ಪ್ರಖರವಾದ ಯೋಜನೆಗಳು, ದೇಶದ ಆರ್ಥಿಕತೆಯನ್ನು ಬದಲಾಯಿಸಿದೆ. ಭಾರತ ವಿಶ್ವ ಪ್ರಬಲ ರಾಷ್ಟ್ರವಾಗಿ ಹೊರಹೊಮ್ಮಿದೆ. ಅಂತಹ ಪ್ರಧಾನಿ ಈ ದೇಶಕ್ಕೆ ಮತ್ತೊಮ್ಮೆ ಬೇಕು. ಅವರ ಆಡಳಿತದಲ್ಲಿ ಬೆಳಗಾವಿಯಿಂದ ಜಗದೀಶ್ ಶೆಟ್ಟರ ಪ್ರಚಂಡ ಬಹುಮತದಿಂದ–ಆಯ್ಕೆ ಮಾಡಿ ಕಳುಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಹೇಳಿದರು.

ಅವರು ಬೆಳಗಾವಿಯ ಕೆ–ಎಲ್‌ಇ ಸಂಸ್ಥೆಯಜೆಎನ್‌ಎಂಸಿ ಆವರಣದ ಸಿಬ್ಬಂದಿವರ್ಗ ಹಾಗೂ ಲಿಂಗರಾಜ ಕಾಲೇಜಿನ ಆವರಣದಲ್ಲಿ ಸಿಬ್ಬಂದಿವರ್ಗದವರನ್ನು ಭೇಟಿಯಾಗಿ ಶೆಟ್ಟರಅವರ ಪರವಾಗಿ ಮತಯಾಚಿಸಿದರು.

ಕೆಎಲ್‌ಇ ನೂರು ವರ್ಷಗಳ ತನ್ನಚ–ರಿತ್ರೆಯಲ್ಲಿ ಘಟಾನುಘಟಿ ರಾಜ–ಕಾರಣಿಗಳನ್ನು ಬೆಳೆಸಿದೆ. ಸಪ್ತರ್ಷಿಗಳು ಕೂಡ ಶಿಕ್ಷಕ ಮತಕ್ಷೇತ್ರವನ್ನು ಪ್ರತಿನಿಧಿಸಿ ಆರಿಸಿ ಬಂದಿದ್ದರು.

ನಮ್ಮ ಸಂಸ್ಥೆಯ ಹಳೆಯ ವಿದ್ಯಾರ್ಥಿಯಾಗಿರಾಜ್ಯದ ಮುಖ್ಯಮಂತ್ರಿ ಹುದ್ದೆಯನ್ನು ನಿರ್ವಹಿಸಿದ್ದ ಶೆಟ್ಟರಅವರು ಸಂಸ್ಥೆಗಾಗಿ ಹಾಗೂ ನಾಡಿಗೆ ಬಹುಮೌಲಿಕವಾದ ಕೊಡುಗೆಯನ್ನು ನೀಡಿದ್ದಾರೆ. ಅವರಅಭಿವೃದ್ಧಿ ಕೆಲಸ ಕಾರ್ಯಗಳು ಇಂದಿಗೂ ಮಹತ್ವ ಪೂರ್ಣವೆನಿಸಿವೆ ಕೊಂಡಿವೆ. ಅವರು ನಮ್ಮವರು, ಎಲ್ಲಕ್ಕೂ ಮುಖ್ಯವಾಗಿ ಬೆಳಗಾವಿಯ ಅಭಿವೃದ್ಧಿಗಾಗಿ ದಶಕಗಳಿಂದ ಕೈಜೋಡಿಸುತ್ತಾ ಬಂದಿದ್ದಾರೆ. ಮೋದಿಜೀಯವರ ಸಮಥ–ರ್ ನೇತೃತ್ವದಲ್ಲಿ ಜರುಗಿರುವ ಲೋಕ ಸಭಾ ಚುನಾವಣೆಯಲ್ಲಿ ಭಾರತೀಯಜನತಾ ಪಕ್ಷ ಬಹುಮತದಿಂದ ಅಧಿಕಾರದ ಚುಕ್ಕಾಣಿಯನ್ನು ಹಿಡಿದರೆದೇಶಚಿತ್ರಣ ಬದಲಾಗುವುದರಲ್ಲಿ ಸಂದೇಹವಿಲ್ಲ.

ದೇಶ ಇಂದು ಜಗತ್ತಿನ ಪ್ರಬಲ ಆರ್ಥಿಕಕ್ಷೇತ್ರದಲ್ಲಿ ಗುರುತಿಸಿ ಕೊಂಡಿದೆ. ನಮ್ಮ ವೈರಿ ರಾಷ್ಟ್ರಗಳು ಭಾರತವನ್ನು ಕಂಡು ಹೆದುರುತ್ತಿವೆ.

ಮೊದಲಿನ ಪರಿಸ್ಥಿತಿ ಇಂದಿಲ್ಲ. ಭಾರತತಲೆಎತ್ತಿ ನಿಂತಿದೆ. ಕಳೆದ ಒಂದುದಶಕದಲ್ಲಿ ವಿಶ್ವದ ಪ್ರಬಲ ರಾಷ್ಟ್ರವಾಗಿ ರೂಪುಗೊಂಡಿದೆ ಇದೆಲ್ಲ ಸಾಧ್ಯವಾದದ್ದು ನರೇಂದ್ರ ಮೋದಿ–ಜಿಯವರಿಂದ ಎಂಬುದನ್ನು ಅರಿಯಬೇಕು. ಪ್ರಜ್ಞಾವಂತರಾದ ನಾವು ಮತದಾನವನ್ನು ಮಾಡಬೇಕು.

## ಮೋದಿ ವರ್ಚಸ್ಸು, ಬಿಜೆಪಿ–ಜೆಡಿಎಸ್ ಮೈತ್ರಿ ನನ್ನ ಭಾರೀ ಗೆಲುವಿಗೆ ಸಹಕಾರಿ: ಶೋಭಾ ಕರಂದ್ಲಾಜೆ

ಬೆಂಗಳೂರು: ಬಿಜೆಪಿ–ಜೆಡಿಎಸ್ ಕೈಜೋಡಿಸಿರುವುದರಿಂದ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ವರ್ಚಸ್ಸಿನಿಂದ ಬೆಂಗಳೂರು ಉತ್ತರ ಕ್ಷೇತ್ರದಲ್ಲಿ ಭಾರೀ ಮತಗಳ ಅಂತರದಿಂದ ಈ ಬಾರಿ ಗೆಲುವು ಸಾಧಿಸುತ್ತೇನೆಂದು ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಉಡುಪಿ–ಚಿಕ್ಕಮಗಳೂರು ಕ್ಷೇತ್ರದಿಂದ ಎರಡು ಬಾರಿ ಸಂಸದರಾಗಿ ಮೂರನೇ ಬಾರಿಗೆ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಿಂದ ಅದೃಷ್ಟ ಪರೀಕ್ಷೆಗೆ ಮುಂದಾಗಿರುವ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕ್ಷೇತ್ರದಲ್ಲಿ ಭರ್ಜರಿ ಪ್ರಚಾರ ಕಾರ್ಯ ನಡೆಸುತ್ತಿದ್ದಾರೆ. ಈ ಬಾರಿ ಹೊಸ ಕ್ಷೇತ್ರದಲ್ಲಿ ಹ್ಯಾಟ್ರಿಕ್ ಗೆಲುವಿನ ವಿಶ್ವಾಸದಲ್ಲಿದ್ದಾರೆ.

## ಗಾಂಧಿನಗರ ಲೋಕಸಭಾ ಕ್ಷೇತ್ರದಿಂದ ಅಮಿತ್ ಶಾ ನಾಮಪತ್ರ ಸಲ್ಲಿಕೆ



ಗಾಂಧಿನಗರ: ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಗಾಂಧಿನಗರ ಲೋಕಸಭಾ ಕ್ಷೇತ್ರದಿಂದ ಭಾರತೀಯ ಜನತಾ ಪಕ್ಷದ (ಬಿಜೆಪಿ) ಅಭ್ಯರ್ಥಿಯಾಗಿ ಶುಕ್ರವಾರ ನಾಮಪತ್ರ ಸಲ್ಲಿಸಿದರು. 'ವಿಜಯ್ ಮುಹೂರ್ತ' ಎಂದು ಪರಿಗಣಿಸಲಾದ ಇಂದು ಮಧ್ಯಾಹ್ನ 12.39ಕ್ಕೆ ಗಾಂಧಿನಗರ ಕಲೆಕ್ಟರ್ ಮತ್ತು ಜಿಲ್ಲಾ ಚುನಾವಣಾಧಿಕಾರಿಗಳಿಗೆ ಅಮಿತ್ ಶಾ ನಾಮಪತ್ರ ಸಲ್ಲಿಸಿದರು. ಅಮಿತ್ ಶಾ ಅವರೊಂದಿಗೆ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರು ಇದ್ದರು.


ಬಿಜೆಪಿ ಮಾಜಿ ಅಧ್ಯಕ್ಷ ಅಮಿತ್ ಶಾ ಅವರು ಕಳೆದ 2019 ರ ಸಾರ್ವತ್ರಿಕ ಚುನಾವಣೆಯಲ್ಲಿ ಗಾಂಧಿನಗರ ಕ್ಷೇತ್ರದಿಂದ 5 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು. ಗುಜರಾತ್‌ನ ಎಲ್ಲಾ 26 ಲೋಕಸಭಾ ಸ್ಥಾನಗಳಿಗೆ ಮೇ 7 ರಂದು ಮೂರನೇ ಹಂತದಲ್ಲಿ ಮತದಾನ ನಡೆಯಲಿದೆ.

# ಸಾಲಗಾರರಿಗೆ ಬಿಗ್ ರಿಲೀಫ್: ಇಎಂಐ ಕಟ್ಟಲು ತಡವಾದ್ರೆ ಇನ್ನುಂದೆ ಬೀಳಲ್ಲ ಹೆಚ್ಚುವರಿ ದಂಡ

ನವದೆಹಲಿ: ನೀವು ಬಾಕಿ ಇರುವ ಸಾಲವನ್ನು ಹೊಂದಿರುವ ಸಾಲಗಾರರಾಗಿದ್ದರೆ, ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಪರಿಚಯಿಸಿದ ಸಾಲ ಸೌಲಭ್ಯಗಳ ಮೇಲಿನ ದಂಡ ಶುಲ್ಕಗಳು ಮತ್ತು ಬಡ್ಡಿಗಳ ಹೊಸ ನಿಯಮಗಳ ಬಗ್ಗೆ ಗಮನ ಹರಿಸಿದೆ.

ಸಾಲ ಒಪ್ಪಂದದಲ್ಲಿ ಇತರ ಯಾವುದೇ ನಿಯಮಗಳ ಉಲ್ಲಂಘನೆಗೆ ದಂಡ ವಿಧಿಸುವುದರ ಹೊರತಾಗಿ, ತಪ್ಪಿದ ಸಾಲ ಪಾವತಿಗಳ ಮೇಲೆ ವಿಧಿಸಲಾದ ಶುಲ್ಕಗಳಿಗೆ ಬಂದಾಗ ಬ್ಯಾಂಕುಗಳು ಮತ್ತು ಬ್ಯಾಂಕೇತರ ಸಾಲದಾತರು ಸಾಲಗಾರರೊಂದಿಗೆ ನ್ಯಾಯಯುತವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಖಚಿತಪಡಿಸಿಕೊಳ್ಳುವ ಗುರಿಯನ್ನು ಈ ನಿಯಮಗಳು ಹೊಂದಿವೆ.

ದಂಡದ ಬಡ್ಡಿ ಶುಲ್ಕ ಎಂದರೇನು: ಇಎಂಐ ಪಾವತಿಯನ್ನು ತಪ್ಪಿಸಿಕೊಂಡಿದ್ದಕ್ಕಾಗಿ ಅಥವಾ ತಡವಾಗಿ ಇಎಂಐ ಪಾವತಿ ಮಾಡಿದ್ದಕ್ಕಾಗಿ ಸಾಲಗಾರರಿಂದ ದಂಡದ ಬಡ್ಡಿ ಶುಲ್ಕವನ್ನು ವಸೂಲಿ ಮಾಡಲಾಗುತ್ತದೆ. ಬ್ಯಾಂಕುಗಳು ಮತ್ತು ಇತರ ಸಾಲದಾತರು ಮುಂದೆ ಹೋಗುವ ಬಡ್ಡಿದರದ ಮೇಲೆ ಹೆಚ್ಚುವರಿ ಶುಲ್ಕವನ್ನು ವಿಧಿಸಲು ಸಾಧ್ಯವಾಗುವುದಿಲ್ಲ. ಬ್ಯಾಂಕುಗಳು ಮತ್ತು ಇತರ ಸಾಲದಾತರು ಸಾಲದ ಮೊತ್ತಕ್ಕೆ ವಿಳಂಬ ಪಾವತಿಯ




ದಂಡವನ್ನು ಸೇರಿಸುತ್ತಿದ್ದಾರೆ ಎಂದು ಕಂಡುಬಂದ ನಂತರ ಆರ್‌ಬಿಐ ಈ ನಿಯಮವನ್ನು ಪರಿಚಯಿಸಿತು, ಇದ–ರಿಂದಾಗಿ ಒಟ್ಟಾರೆ ಇಎಂಐ ಬಾಕಿಯನ್ನು ಹೆಚ್ಚಿಸುತ್ತದೆ.

ಸಾಲದಾತರು ಇನ್ನೂ ವಿಳಂಬ ಪಾವತಿ ದಂಡವನ್ನು ವಿಧಿಸಬಹುದು, ಆದರೆ ಅವರು ಈ ಮೊತ್ತವನ್ನು ಸಾಲದ ಮೊತ್ತಕ್ಕೆ ಸೇರಿಸಲು ಸಾಧ್ಯವಿಲ್ಲ. ತಪ್ಪಿತಸ್ಥ ಸಾಲಗಾರನ ನಡವಳಿಕೆಯನ್ನು ಸರಿಪಡಿಸಲು ದಂಡವನ್ನು ಬಳಸಬೇಕು. ಆದಾಗ್ಯೂ, ಬ್ಯಾಂಕುಗಳು ಮತ್ತು ಸಾಲದಾತರು ಅನ್ಯಾಯವಾಗಿ ದಂಡ ವಿಧಿಸುವ ಮೂಲಕ ತಮ್ಮ ಬ್ಯಾಲೆನ್ಸ್ ಶೀಟ್ಗಳನ್ನು ಹೆಚ್ಚಿಸುವುದರಿಂದ ದೂರವಿರಬೇಕು ಎಂದು ಆರ್‌ಬಿಐ ತಿಳಿಸಿದೆ. ಸಾಲಗಾರರಿಂದ ವಸೂಲಿ ಮಾಡಿದ ದಂಡದ ಬಡ್ಡಿದರಗಳ ಬಗ್ಗೆ ಹೊಸ ಆರ್‌ಬಿಐ ಮಾರ್ಗಸೂಚಿಗಳು ಏಪ್ರಿಲ್ 1, 2024 ರಿಂದ ಜಾರಿಗೆ ಬಂದಿವೆ.

ಅಸ್ತಿತ್ವದಲ್ಲಿರುವ ಸಾಲಗಳು ಹೊಸ ನಿಯಮದ ವ್ಯಾಪ್ತಿಗೆ ಬರುತ್ತವೆಯೇ: ಹೌದು, ಹೊಸ ನಿಯಮವು ಜೂನ್ 1, 2024 ರಿಂದ ಅಸ್ತಿತ್ವದಲ್ಲಿರುವ ಎಲ್ಲಾ ಸಾಲಗಳಿಗೆ ಅನ್ವಯಿಸುತ್ತದೆ.

ಏಪ್ರಿಲ್ 1, 2024 ರಿಂದ, ಎಲ್ಲಾ ಹೊಸ ಸಾಲಗಳು ದಂಡದ ಶುಲ್ಕಗಳ ಮೇಲೆ ಆರ್‌ಬಿಐ ನಿಯಮದ ವ್ಯಾಪ್ತಿಗೆ ಬರುತ್ತವೆ. ಗ್ರಾಹಕರ ಹೆಚ್ಚಿನ ಒಳಿತಿಗಾಗಿ ಚಿಲ್ಲರೆ ಮತ್ತು ವಾಣಿಜ್ಯ ಸಾಲಗಾರರ ಮೇಲೆ ವಿಧಿಸಲಾದ ದಂಡವನ್ನು ಸುಗಮಗೊಳಿಸಲು ಕೇಂದ್ರ ಬ್ಯಾಂಕ್ ನಿರ್ಧರಿಸಿದೆ. ಸಾಲದ ಇಎಂಐ ಮರುಪಾವತಿ ಸುಸ್ತಿಗಾಗಿ ದಂಡ ಶುಲ್ಕಗಳ ಮೇಲೆ ಕೇಂದ್ರ ಬ್ಯಾಂಕ್ ಯಾವುದೇ ಗರಿಷ್ಠ ಮಿತಿಯನ್ನು ನಿರ್ದಿಷ್ಟಪಡಿಸಿಲ್ಲ.

## ರಾಜ್ಯಪಾಲರ ಆಡಳಿತ ಹೇರಿಕೆ ಕುರಿತು ಬಿಜೆಪಿಯಿಂದ ಬೆದರಿಕೆ: ಡಿಕೆ.ಶಿವಕುಮಾರ್



ಬೆಂಗಳೂರು: ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ರಾಜ್ಯದಲ್ಲಿ ರಾಜ್ಯಪಾಲರ ಆಳ್ವಿಕೆ ಹೇರಲಾಗುವುದು ಎಂದು ಮತದಾರರಿಗೆ ಬಿಜೆಪಿ ಬೆದರಿಕೆ ಹಾಕುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಶುಕ್ರವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಪಕ್ಷದ ನಾಯಕ (ಎಲ್‌ಒಪಿ) ಆರ್. ಅಶೋಕ್ ಗೌಪ್ಯವಾಗಿ ಏನು ಮಾಡಲು ಪ್ರಯತ್ನಿಸುತ್ತಿದ್ದಾರೆ? ನಾಟಕವಾಡುವ ಮೂಲಕ ಕರ್ನಾಟಕವನ್ನು ರಾಜ್ಯಪಾಲರ ಅಧೀನದಲ್ಲಿಡುತ್ತೇವೆ ಎಂದು ಹೇಳುತ್ತಿದ್ದಾರೆ. ಅವರ ಯೋಜನೆ ಹೇಗೆಯೇ ಇದ್ದರು, ಕರ್ನಾಟಕದಲ್ಲಿ ಅದು ಸಾಧ್ಯವಿಲ್ಲ ಎಂದು ಹೇಳಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಇಲ್ಲದಂತಾಗಿದೆ ಎಂದು ಹೇಳುತ್ತಿದ್ದಾರೆ. ಆದರೆ, ಕರ್ನಾಟಕ ರಾಜ್ಯವು ದೇಶದಲ್ಲೇ ಅತ್ಯುತ್ತಮ ಕಾನೂನು ಮತ್ತು ಸುವ್ಯವಸ್ಥೆಯನ್ನು ಹೊಂದಿದೆ ಎಂದು ತಿಳಿಸಿದರು.

## ದೇಶದ ಅಭಿವೃದ್ಧಿಗಾಗಿ ಬಿಜೆಪಿಗೆ ಬೆಂಬಲ ನೀಡಿ: ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್

ಬೆಳಗಾವಿ: ದೇಶದಲ್ಲಿ ನರೇಂದ್ರ ಮೋದಿಯವರು ಮಗದೊಮ್ಮೆ ಪ್ರಧಾನಿ ಆಗಬೇಕು. 10 ವರ್ಷದ ಅವಧಿಯಲ್ಲಿ ಸ್ವಚ್ಛ ಆಡಳಿತ ಶ್ರೇಷ್ಠ ನಾಯಕ ಮೋದಿ ಅವರು, ಇಲ್ಲಿವರೆಗೂ ಒಂದೇ ಒಂದು ಭ್ರಷ್ಟಾಚಾರ ಆಗಿಲ್ಲ. ದೇಶದ ಹಿತಕಾಗಿ ಬಿಜೆಪಿಯನ್ನು ಬಹುಮತ ಅಂತರದಿಂದ ಗೆಲ್ಲಿಸಬೇಕು ಎಂದು ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಹೇಳಿದರು.

ಬೆಳಗಾವಿ ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣಕ್ಕೆ ಬಿಜೆಪಿ ಅಭ್ಯರ್ಥಿ ಜಗಧೀಶ್ ಶೆಟ್ಟರ್ ಶುಕ್ರವಾರ ಭೇಟಿ ನೀಡಿ ತಮಗೆ ಮತ ನೀಡಿ ಗೆಲುವು ಸಾಧಿಸಲು ಅನುಕೂಲ ಕಲ್ಪಿಸಬೇಕೆಂದು ವಕೀಲರಲ್ಲಿ ಮನವಿ ಮಾಡಿದರು.

ಕೋರ್ಟ್ ಆವರಣದಲ್ಲಿ ಇರುವ ವಕೀಲರ ಸಂಘದ ಜೊತೆ ಆಯೋಜನೆ ಮಾಡಲಾಗಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ




ಅವರು,ದೇಶದ ದಶದಿಕ್ಕಿನಲ್ಲಿ ಬಿಜೆಪಿ ಅಭಿವೃದ್ಧಿ ಮಾಡಿದೆ, ದಿ. ಸುರೇಶ ಅಂಗಡಿಯವರ ಅಭಿವೃದ್ಧಿಯ ಕಾರ್ಯಗಳು ಉದಾಹರಣೆ ಇವೆ. ಬೆಳಗಾವಿ ಜನತೆಯ ಕನಸು ಈಡೇ–ರಿಸಿದವರು ಅಂಗಡಿ ಕುಟುಂಬದವರು. ದಿ. ಸುರೇಶ ಅಂಗಡಿಯವರಿಗೆ ತೋರಿದ ಪ್ರೀತಿ ನಮಗೂ ತೋರಬೇಕು. ಮುಂದಿನ ದಿನಗಳಲ್ಲಿ ನ್ಯಾಯವಾದಿಗಳ ಸಮಸ್ಯೆಗೆ ಸ್ಪಂದಿಸಿ, ನಿಮ್ಮ ಏಳಿಗೆಗೆ ಶ್ರಮಿಸಲಾಗುವುದು. ನಿಮ್ಮ ಸೇವೆ ಮಾಡಲು ಅವಕಾಶ ಮಾಡಿ ಕೊಡಬೇಕು ಎಂದು ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಮನವಿ ಮಾಡಿಕೊಂಡರು.

ರಾಜ್ಯದಲ್ಲಿಯೇ ಬೆಳಗಾವಿ ಬಾರ್ ಅಸೋಸೀಯೇಶನ್ ತುಂಬಾ ಶಿಸ್ತಿನ ಸಂಘ ಆಗಿದೆ. ದೇಶವನ್ನು ಸ್ವಾತಂತ್ರ್ಯ ಮಾಡಲು ಹೋರಾಟ ಮಾಡಿದರು ಒಬ್ಬ ವಕೀಲ. ಜನರಿಗೆ ಅನ್ಯಾಯ ಆದಾಗ ಅವರಿಗೆ ನ್ಯಾಯ ಕೊಡಿಸುವವರು ಒಬ್ಬ ವಕೀಲ. ಒಬ್ಬ ವಕೀಲರಿಗೆ 3 ಸಾವಿರ ವೋಟ್ ಹಾಕಿಸುವ ಶಕ್ತಿ ಇದೆ ಎಂದು ಹೇಳಿದ್ದರು.

ಈ ವೇಳೆ ಬಿಜೆಪಿ ಕಾರ್ಯಕರ್ತ ವಕೀಲ ಎಂ.ಬಿ ಜೀರಲಿ, ಮಾಜಿ ಶಾಸಕ ಅನಿಲ್ ಬೆನಕೆ, ಆರ್ ಎಸ್ ಮುತಾಲಿಕ್, ಮುರುಘೇಂದ್ರ ಗೌಡ ಪಾಟೀಲ್ಜ ಹನುಮಂತ ಕೊಂಗಾಲಿ ಸೇರಿ ಹಲವು ವಕೀಲರು ಹಾಜರಿದ್ದರು

## ಬಿಜೆಪಿ ಮಾಜಿ ಸಚಿವ ಮಾಲಿಕಯ್ಯ ಗುತ್ತೇದಾರ್ ಕಾಂಗ್ರೆಸ್ ಸೇರ್ಪಡೆ

ಬೆಂಗಳೂರು: ಲೋಕಸಭೆ ಚುನಾವಣೆ ಹೊತ್ತಿನಲ್ಲಿ ಬಿಜೆಪಿಗೆ ಮತ್ತೊಂದು ಹಿನ್ನಡೆ ಉಂಟಾಗಿದೆ. ಕಲ್ಯಾಣ ಕರ್ನಾಟಕದ ಭಾಗದಲ್ಲಿ ಹೆಚ್ಚು ಪ್ರಭಾವ ಹೊಂದಿರುವ ಮಾಜಿ ಸಚಿವ ಮತ್ತು ಕಲಬುರಗಿಯ ಪ್ರಭಾವಿ ನಾಯಕ ಮಾಲಿಕಯ್ಯ ಗುತ್ತೇದಾರ್ ಬಿಜೆಪಿ ತೊರೆದು ಮರಳಿ ಗೂಡಿಗೆ ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ.

ಶುಕ್ರವಾರ ಕೆಪಿಸಿಸಿ ಕಚೇ–ರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸಮ್ಮುಖದಲ್ಲಿ ಸೇರಿದರು. ಪಕ್ಷ ಸೇರ್ಪಡೆ ಬಳಿಕ ಮಾತನಾಡಿದ ಮಾಲಿಕಯ್ಯ ಗುತ್ತೇದಾರ, ಬಿಜೆಪಿ ನನ್ನನ್ನು



ನಡೆಸಿಕೊಂಡ ಬಗ್ಗೆ ಬಹಳ ನೋವಿದೆ. ಹಿಂದುಳಿದ ವರ್ಗದವನನ್ನು ಹೇಗೆ ನಡೆಸಿಕೊಳ್ಳುತ್ತಾರೆಂಬ ಅನುಭವ ಆಗಿದೆ. ಎಂ.ವೈ.ಪಾಟೀಲ್ ಕೂಡ ಕಾಂಗ್ರೆಸ್ಗೆ ಬರ ಮಾಡಿಕೊಂಡಿದ್ದಾರೆ ಎಂದು ಹೇಳಿದರು.

ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಮಾತನಾಡಿ, ರಾಜ್ಯದ ಉದ್ದಗಲಕ್ಕೂ ಬಿಜೆಪಿ, ಜೆಡಿಎಸ್ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದಾರೆ. ಬಿಜೆಪಿಯವರಿಗೆ ಧ್ವನಿ ಇಲ್ಲ, ಧ್ವನಿ ಕಳೆದುಕೊಂಡಿದ್ದಾರೆ. ಷರತ್ತು ಇಲ್ಲದೆ ಪಕ್ಷಕ್ಕೆ ಬರುವವ–ರಿಗೆ ನಮ್ಮ ಸ್ವಾಗತ. ಸ್ಥಳೀಯ ಮಟ್ಟದಲ್ಲಿ ಯಾರು ಬೇಕಾದರೂ ಬರಬಹುದು.ಜೆಡಿಎಸ್ ಸಿದ್ಧಾಂತ ಬದಲಾಗುತ್ತಿದೆ. ಅದಕ್ಕಾಗಿ ಹಲವು ನಾಯಕರು ಕಾಂಗ್ರೆಸ್ಗೆ ಬರುತ್ತಿದ್ದಾರೆ ಎಂದು ಹೇಳಿದರು.

ನನ್ನದು ಮತ್ತು ಮಾಲೀಕಯ್ಯ ಗುತ್ತೇದಾರ್ ಸಂಬಂಧ 35 ವರ್ಷ ಹಳೆಯದ್ದು, ಮಾಲೀಕಯ್ಯ ಗುತ್ತೇದಾರ್ ಅವರು ಮಂತ್ರಿಯಾಗಿ ಕೆಲಸ ಮಾಡಿದ್ದಾರೆ. ಯಾವುದೇ ಷರತ್ತು ಇಲ್ಲದೆಯೇ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ ಎಂದರು.

ದೇಶದಲ್ಲಿ ಬಿಜೆಪಿ 200 ಸೀಟೂ ಕೂಡ ದಾಟುವುದಿಲ್ಲ ಎಂಬ ಮಾಹಿತಿ ಇದೆ. ದಕ್ಷಿಣ ಭಾರತದ ಎಲ್ಲ ಕಡೆ ಕಾಂಗ್ರೆಸ್ ಹೆಚ್ಚು ಸ್ಥಾನ ಗೆಲ್ಲಲಿದೆ. ಇಡೀ ದಕ್ಷಿಣ ಭಾರತದಲ್ಲಿ ಬಿಜೆಪಿ ಸಿಂಗಲ್ ಡಿಜಿಟ್ಗೆ ಉಳಿದುಕೊಳ್ಳುತ್ತಾರೆ. ಕರ್ನಾಟಕ ತೆಲಂಗಾಣ ಸೇರಿ ಎಲ್ಲ ಕಡೆಯೂ ಬಿಜೆಪಿ ಸಿಂಗಲ್ ಡಿಜಿ–ಟ್ಗೆ ಉಳಿಯಲಿದೆ. ಇದು ನಮ್ಮ ಪಕ್ಷಕ್ಕೆ ಸಿಕ್ಕಿರುವ ಮಾಹಿತಿ ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಮಾಲೀಕಯ್ಯ ಗುತ್ತೇದಾರ್ ಚಿರಪ 'ರಿಚಿತರು ಹಾಗೂ ಆತ್ಮೀಯರು. ಮಾಲೀಕಯ್ಯ ಗುತ್ತೇದಾರ್ ತರಹದವರಿಗೆ ಬಿಜೆಪಿಯಲ್ಲಿ ಇರುವುದಕ್ಕೆ ಸಾಧ್ಯ ಆಗುವುದಿಲ್ಲ.ಇವರು ಸಾಮಾಜಿಕ ನ್ಯಾಯದ ಪರವಾಗಿ ಇದ್ದವರು. ಮಾಲೀಕಯ್ಯ ನಮ್ಮ ಪಕ್ಷಕ್ಕೆ ಬಂದಿದ್ದರಿಂದ ಕಲಬುರಗಿ ಸೇ–ರಿದಂತೆ ರಾಜ್ಯದಲ್ಲಿ ರಾಜ–ಕೀಯವಾಗಿ ಪರಿಣಾಮ ಉಂಟಾಗುತ್ತದೆ ಎಂದರು.

## ಧಾರವಾಡ ಲೋಕಸಭೆ ಸಾರ್ವತ್ರಿಕ ಚುನಾವಣೆ

### ಧಾರವಾಡ ಲೋಕಸಭಾ ಮತಕ್ಷೇತ್ರಕ್ಕೆ 29 ಜನ ಅಭ್ಯರ್ಥಿಗಳಿಂದ 44 ನಾಮಪತ್ರಗಳು ಸಲ್ಲಿಕೆ ಆಗಿವೆ: ಚುನಾವಣಾಧಿಕಾರಿ ದಿವ್ಯ ಪ್ರಭು



ಧಾರವಾಡ: ಧಾರವಾಡ ಲೋಕಸಭಾ ಮತಕ್ಷೇತ್ರಕ್ಕೆ ಏ.12 ರಿಂದ ಏ.19 ರ ವರೆಗೆ ರಜಾ ದಿನಗಳನ್ನು ಹೊರತುಪಡಿಸಿ, ಆರು ದಿನಗಳಲ್ಲಿ ಒಟ್ಟು 29 ಜನ ಅಭ್ಯರ್ಥಿಗಳಿಂದ 44 ನಾಮಪತ್ರಗಳು ಸಲ್ಲಿಕೆ ಆಗಿವೆ ಎಂದು ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಧಾರವಾಡ ಲೋಕಸಭೆ ಮತಕ್ಷೇತ್ರಕ್ಕೆ ಏ.12 ರ ಮೊದಲ ದಿನ ಒಬ್ಬ ಅಭ್ಯರ್ಥಿಯಿಂದ ಒಂದು ನಾಮಪತ್ರ, ಏ.15 ರ ಎರಡನೇಯ ದಿನದಂದು ಐದು ಜನ ಅಭ್ಯರ್ಥಿಗಳಿಂದ 11 ನಾಮಪತ್ರಗಳು, ಏ.16 ರ ಮೂರನೇಯ ದಿನದಂದು ನಾಲ್ಕು ಜನ ಅಭ್ಯರ್ಥಿಗಳಿಂದ 9 ನಾಮಪತ್ರಗಳು, ಏ.17 ರ ನಾಲ್ಕನೇಯ ದಿನದಂದು ನಾಲ್ಕು ಜನ ಅಭ್ಯರ್ಥಿಗಳಿಂದ ಐದು ನಾಮಪತ್ರಗಳು, ಏ.18 ರ ಐದನೇಯ ದಿನದಂದು ನಾಲ್ಕು ಜನ ಅಭ್ಯರ್ಥಿಗಳಿಂದ ಆರು ನಾಮಪತ್ರಗಳು ಮತ್ತು ಏ.19 ರ ಆರನೇಯ ದಿನವಾದ ಇಂದು ನಾಮಪತ್ರಗಳ ಸಲ್ಲಿಕೆಗೆ ಕೊನೇಯ ದಿನವಾಗಿದ್ದು, 11 ಜನ ಅಭ್ಯರ್ಥಿಗಳಿಂದ 12 ನಾಮಪತ್ರಗಳು ಸಲ್ಲಿಕೆ ಆಗಿವೆ.

ಒಟ್ಟು 29 ಜನ ಅಭ್ಯರ್ಥಿಗಳಿಂದ 44 ನಾಮಪತ್ರಗಳು ಸಲ್ಲಿಕೆ ಆಗಿವೆ ಎಂದು ಅವರು ತಿಳಿಸಿದ್ದಾರೆ. ಇಂದು ಏ.20 ರಂದು ಬೆಳಿಗ್ಗೆ 11 ಗಂಟೆಯಿಂದ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿರುವ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ನಾಮಪತ್ರಗಳ ಪರಿಶೀಲನೆ ಕಾರ್ಯ ಜರುಗಲಿದೆ ಎಂದು ಚುನಾವಣಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಹಾ ಹತ್ಯೆ ಖಂಡಿಸಿ ಮುನವಳ್ಳಿಯಲ್ಲಿ ಭುಗಿಲೆದ್ದ ಆಕ್ರೋಶ: ರಾಜ್ಯ ಹೆದ್ದಾರಿ ಸಂಚಾರ ಸ್ಥಗಿತ



ಬೆಳಗಾವಿ: ಹುಬ್ಬಳ್ಳಿಯ ಕಾಲೇಜಿನಲ್ಲಿ ಗುರುವಾರ ನಡೆದ ವಿದ್ಯಾರ್ಥಿನಿ ನೇಹಾ ಕೊಲೆ ಖಂಡಿಸಿ, ಜಿಲ್ಲೆಯ ಸವದತ್ತಿ ತಾಲೂಕಿನ ಮುನವಳ್ಳಿಯಲ್ಲಿ ವಿವಿಧ ಸಮುದಾಯಗಳ ನಾಗರಿಕರು, ಕಾಂಗ್ರೆಸ್ ಮುಖಂಡರು ಪ್ರತ್ಯೇಕವಾಗಿ ತೀವ್ರ ಪ್ರತಿಭಟನೆ ನಡೆಸಿ ರಾಜ್ಯ ಹೆದ್ದಾರಿ ಸಂಚಾರ ಸ್ಥಗಿತಗೊಳಿಸಿ ಆಕ್ರೋಶ ಹೊರಹಾಕಿದರು.

ಎಂಸಿಎ ಓದುತ್ತಿದ್ದ ನೇಹಾ ಹಿರೇಮಠ (25) ಅವರನ್ನು ಸವದತ್ತಿ ತಾಲೂಕಿನ ಮುನಚವಳ್ಳಿ ಗ್ರಾಮದ ಸಹಪಾಠಿ ಫಯಾಜ್ (27) ಕಾಲೇಜು ಆವರಣದಲ್ಲೇ ಚಾಕು ಇರಿದು ಕೊಲೆ ಮಾಡಿದ್ದ. ಫಯಾಜ್ ಮುನವಳ್ಳಿ ಗ್ರಾಮದವನಾದ್ದರಿಂದ ಗ್ರಾಮದ ಜನ ಘಟನೆಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಅಲ್ಲದೇ ಗ್ರಾಮದಲ್ಲಿ ವ್ಯಾಪಾರ ವಹಿವಾಟು, ರಸ್ತೆ ಸಂಚಾರ ಬಂದ್ ಮಾಡಿ ಆರೋಪಿ ವಿರುದ್ಧ ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಇದಕ್ಕೂ ಮೊದಲು ಗ್ರಾಮದಲ್ಲಿ ಐತಿಹಾಸಿಕ ಪಂಚಲಿಂಗೇಶ್ವರ ದೇವಸ್ಥಾನದ ಬಳಿ ಜನ ಧರಣಿ ನಡೆಸಿದರು. ಹಿಂದೂ, ಮುಸ್ಲಿಂ, ವೀರಶೈವ ಲಿಂಗಾಯತ ಸಮುದಾಯ ಸೇರಿದಂತೆ ವಿವಿಧ ಸಮುದಾಯಗಳ ಜನರೂ ಪಾಲ್ಗೊಂಡರು.ವಿದ್ಯಾರ್ಥಿನಿ ಕೊಲೆ ಅತ್ಯಂತ ನೋವು ತರಿಸಿದೆ. ಆರೋಪಿ ಫಯಾಜ್‌ಗೆ ಕಠಿಣ ಶಿಕ್ಷೆ ಕೊಡಿಸಬೇಕು. ಇಂಥ ಘಟನೆಗಳು ಮರುಕಳಿಸದಂತೆ ಕಾಲೇಜುಗಳಲ್ಲಿ ವಿದ್ಯಾರ್ಥಿನಿಯರಿಗೆ ರಕ್ಷಣೆ ಒದಗಿಸಬೇಕು ಎಂದು ಆಗ್ರಹಿಸಿದರು.

ಅಘೋಷಿತ ಬಂದ್: ರಾಜ್ಯ ಹೆದ್ದಾರಿಗೆ ಹೊಂದಿಕೊಂಡ, ಐತಿಹಾಸಿಕ ಮಹತ್ವದ ಪಡೆದ ಮುನವಳ್ಳಿ ಗ್ರಾಮ ಪ್ರಮುಖ ವಾಣಿಜ್ಯ ಕೇಂದ್ರವೂ ಆಗಿದೆ. ಆದರೆ, ಶುಕ್ರವಾರ ಬೆಳಿಗ್ಗೆಯಿಂದ ಇಡೀ ಗ್ರಾಮದಲ್ಲಿ ಅಘೋಷಿತ ಬಂದ್ ವಾತಾವರಣ ನಿರ್ಮಾಣವಾಯಿತು.

ಪ್ರತಿಭಟನೆ ಆರಂಭವಾಗುತ್ತಿದ್ದಂತೆಯೇ ಎಲ್ಲ ವರ್ತಕರು ಸ್ವಯಂಪ್ರೇರಿತವಾಗಿ ಮಳಿಗೆಗಳನ್ನು ಬಂದ್ ಮಾಡಿದರು. ಬೀದಿಬದಿಯಲ್ಲಿ ಹಣ್ಣು, ಹೂವು, ತರಕಾರಿ ಮಾರುವವರೂ ತಮ್ಮ ವ್ಯಾಪಾರ ನಿಲ್ಲಿಸಿದರು. ಗ್ರಾಮದಲ್ಲಿ ಜನಸಂಚಾರ ವಿರಳವಾಗಿದ್ದು, ಆತಂಕದ ವಾತಾವರಣ ಮನೆ ಮಾಡಿದೆ. ಮುಂಜಾಗ್ರತಾ ಕ್ರಮವಾಗಿ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ.

## ಮತದಾರರು ಈ ಬಾರಿ 'ಕೈ' ಗೆ ಶಕ್ತಿ ನೀಡಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಕಾಂಗ್ರೆಸ್ ಪಂಚದ ಗ್ಯಾರಂಟಿಗಳ ಜೊತೆಗೆ ನಮ್ಮ ತಂದೆಯವರಾದ ಸತೀಶ ಜಾರಕಿಹೊಳಿಯವರು ಕ್ಷೇತ್ರದಲ್ಲಿ ಮಾಡಿದ ಅಭಿವೃದ್ಧಿ ಕಾಮಗಾರಿಗಳು ನಮಗೆ ಶ್ರೀರಕ್ಷೆಯಾಗಲಿದೆ. ಆದ್ದರಿಂದ ಮತದಾರರು ದೃಢ ನಿರ್ಧಾರ ಮಾಡಿ "ಕೈ "ಗೆ ಶಕ್ತಿ ನೀಡಬೇಕು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮನವಿ ಮಾಡಿದರು.

ಚಿಕ್ಕೋಡಿ ಲೋಕಸಭೆ ಚುನಾವಣೆಯ ಪ್ರಚಾರದ ಪ್ರಯುಕ್ತ ಯಮಕನಮರಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೊಸೂರ, ಗುಗ್ರ್ಯಾನಟ್ಟಿ, ಭೂತರಮನಹಟ್ಟಿ,, ಗೋಡಿವಾಳ, ಉಕ್ಕಡ–ರಾಮದುರ್ಗ, ಬೊಮ್ಮನಹಟ್ಟಿ ಗ್ರಾಮದಲ್ಲಿ ಹಮ್ಮಿಕೊಂಡ ಲೋಕಸಭೆಯ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿ, ದೇಶ ಕಟ್ಟುವಲ್ಲಿ ಕಾಂಗ್ರೆಸ್



ಪಕ್ಷ ಅಪಾರ ಕೊಡುಗೆ ನೀಡಿದೆ. ಬ್ಯಾಂಕ್ ರಾಷ್ಟ್ರೀಕರಣ, ಗರೀಬಿ ಹಟಾವೋ, ನೀರಾವರಿ, ರಸ್ತೆಗಳು, ಶಾಲಾ ಕಾಲೇಜು, ವಿಶ್ವ ವಿದ್ಯಾಲಯಗಳು, ಇಸ್ರೊ ಸಂಸ್ಥೆ ಕಟ್ಟುವಂತಹ ಹಲವಾರು ಕೆಲಸಗಳನ್ನು ಮಾಡಿದೆ. ಅಲ್ಲದೇ ಕಳೆದ ವಿಧಾನ ಸಭೆಯ ಚುನಾವಣೆಯಲ್ಲಿ ಕೊಟ್ಟ ಎಲ್ಲ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿ ನಮ್ಮ ಸರ್ಕಾರ ನುಡಿದಂತೆ ನಡೆದಿದೆ.

ಈ ಭಾರಿ ಚಿಕ್ಕೋಡಿ ಸಮಗ್ರ ಅಭಿವೃದ್ಧಿಗೆ ನನಗೆ ಬೆಂಬಲಿ ನೀಡಿ, ನಮ್ಮ ತಂದೆಯವರಾದ ಸತೀಶ್ ಜಾರಕಿಹೊಳಿ ಅವರ ಕೈ ಬಲಪಡಿಸಬೇಕು ಎಂದು ಮನವಿ ಮಾಡಿದರು.

ಯಮಕಣಮರಡಿ ಕ್ಷೇತ್ರವನ್ನು ಈಗಾಗಲೇ ಅಭಿವೃದ್ದಿಯತ್ತ ಕೊಂಡೊಯ್ಯಲಾಗುತ್ತಿದೆ. ಕಾಂಗ್ರೆಸ್ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಂತ ಪಕ್ಷ. ದೇಶಕ್ಕೆ ವಿದ್ಯುತ್, ಟಿವಿ, ಬಡವರಿಗೆ ಭೂಮಿ ನೀಡಿದ್ದು ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಗಳನ್ನು ನೀಡಿದೆ. ಹಾಗಾಗಿ ಕಾಂಗ್ರೆಸ್ ಅನ್ನು ಅಧಿಕಾರಕ್ಕೆ ತಂದರೆ ಬಡವರಿಗೆ ಅನುಕೂಲವಾಗಲಿದೆ ಎಂದರು.

ಕೇಂದ್ರದಲ್ಲಿ ಹತ್ತು ವರ್ಷಗಳಿಂದ ಬಿಜೆಪಿ ಕೊಟ್ಟ ಭರವಸೆ ಜಾರಿ ಮಾಡಿಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ದೇಶದ ಪ್ರತಿ ಮಹಿಳೆಯ–ರಿಗೆ 1 ಲಕ್ಷ ಕೊಡ್ತೇವೆ ಎಂದು ಈಗಾಗಲೇ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಘೋಷಣೆ ಮಾಡಿದ್ದಾರೆ. ಇದು ಕಾಂಗ್ರೆಸ್ ಪಕ್ಷದ ಬಡವರ ದಲಿತರ ಬಗ್ಗೆ ಇರುವ ಕಾಳಜಿ ಎಂದರು.

ಈ ಬಾರಿ ಮತದಾರರು ಇಡಿ ಕ್ಷೇತ್ರ ಅಭಿವೃದ್ಧಿ ಮಾಡಲು ಕಾಂಗ್ರೆಸ್ ಗೆ ಬೆಂಬಲ ನೀಡುವ ಮೂಲಕ ನನಗೆ ತಮ್ಮ ಅಮೂಲ್ಯವಾದ ನೀಡಬೇಕು. ನಿಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕು. ನಿಮ್ಮ ಮನೆ–ಮಗಳನ್ನು ಕೈ ಹಿಡಿದು ನಡೆಸುವ ಜವಾಬ್ದಾರಿ ನಿಮ್ಮ ಮೇಲಿದೆ. ಈ ಕ್ಷೇತ್ರದಿಂದ ಆಯ್ಕೆಯಾದರೆ, ಹಗಲಿರುಳು ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಮನವಿ ಮಾಡಿದರು.

ಪ್ರಚಾರದ ವೇಳೆ ವಿವಿಧ ಗ್ರಾಮಗಳಿಗೆ ಆಗಮಿಸಿದ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಅದ್ದೂರಿಯಾಗಿ ಸ್ವಾಗತ ಕೋರಲಾಯಿತು.

ಅಲ್ಲದೇ ಗ್ರಾಮದಲ್ಲಿದ್ದ ಮಹಿಳೆಯರು ಪ್ರಿಯಂಕಾ ಅವರಿಗೆ ಆರತಿ ಎತ್ತಿ, ಹೂ ಮಾಲೆ ಹಾಕಿ ಸನ್ಮಾನಿಸಿದರು. ಈ ವೇಳೆ ಹಾಲಪ್ಪ ನಾಯಕ್, ರಾಮಚಂದ್ರ ಜಂಟ್, ಗಿಡ್ಡಪ್ಪ ಜಂಟ್, ಬಸಪ್ಪ ನಾಯ್ಕ್ , ಶೆಟ್ಟೆಪ್ಪ ಜಂಟ್ ಸೇರಿದಂತೆ ಗ್ರಾಮದ ಹಿರಿಯರು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತ–ರಿದ್ದರು.


## ಪಿಎಚ್‌ಡಿ ಪದವಿ

ಬಳ್ಳಾರಿ: ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿ ತಿಪ್ಪೇಸ್ವಾಮಿ. ಎಂ ಅವರಿಗೆ ಪಿಹೆಚ್ಡಿ ಪದವಿ ಲಭಿಸಿದೆ. ವಿಶ್ವವಿದ್ಯಾಲಯದ ಇಂಗ್ಲೀಷ್ ಅಧ್ಯಯನ ವಿಭಾಗದ ಕಲಾ ನಿಕಾಯದ ಇಂಗ್ಲೀಷ್ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಪ್ರಾಧ್ಯಾಪಕರಾದ ಡಾ.ಶಾಂತನಾಯ್ಕ.ಎನ್ ಅವರ ಮಾರ್ಗದರ್ಶನದಲ್ಲಿ "ಆಂಟಿ ಇಂಪೀರಿಯಲಿಸಮ್ ಅಂಡ್ ರಿಕನ್ಸ್ಟ್ರಕ್ಷನ್ ಆಫ್ರಿಕನ್ ಇಮೇಜ್ ಇನ್ ಸೆಲೆಕ್ಟ್ ನಾವೆಲ್ಸ್ ಆಫ್ ಜೆ.ಎಂ.ಕಟ್ಜಿ" ಎಂಬ ವಿಷಯ ಕು–ರಿತು ಪ್ರಬಂಧ ಮಂಡನೆ ಮಾಡಿದ್ದಕ್ಕಾಗಿ ವಿಶ್ವ ವಿದ್ಯಾಲಯವು ತಿಪ್ಪೇಸ್ವಾಮಿ.ಎಂ ಅವರಿಗೆ ಪಿಹೆಚ್ಡಿ ಪದವಿ ಘೋಷಿಸಿದೆ.

## ಕೊಡಗು: ಎಸ್ಟೇಟ್ ನಲ್ಲಿ ಕಾರ್ಮಿಕನನ್ನು ಕೊಂದಿದ್ದ ಹುಲಿ ಸೆರೆ

ಕೊಡಗು: ಇತ್ತೀಚೆಗೆ ಕೊಡಗಿನಲ್ಲಿ ಎಸ್ಟೇಟ್ ಕಾರ್ಮಿಕನನ್ನು ಕೊಂದಿತ್ತು ಎನ್ನಲಾದ ಹುಲಿಯನ್ನು (ಶುಕ್ರವಾರ, 19–04–2024) ಸೆರೆ ಹಿಡಿಯಲಾಗಿದೆ. ಈ ಕಾರ್ಯಾಚರಣೆಯಲ್ಲಿ 70 ಕ್ಕೂ ಹೆಚ್ಚು ಅರಣ್ಯ ಸಿಬ್ಬಂದಿಗಳು ಭಾಗಿಯಾಗಿದ್ದರು.

ಗುರುವಾರದಂದು ಅಸ್ಸಾಂ ಮೂಲದ ಮೊಹಿಸಿರ್ ರೆಹಮಾನ್(50) ಎಂಬಾತನನ್ನು



ದಕ್ಷಿಣ ಕೊಡಗಿನ ನಿಟ್ಟೂರು ಗ್ರಾಮದ ಕೃಷಿ ಭೂಮಿಯಲ್ಲಿ ಹುಲಿ ಕೊಂದಿತ್ತು. ಘಟನೆಯಿಂದ ಆತಂಕಗೊಂಡ ರೈತರು ಮತ್ತು ಗ್ರಾಮಸ್ಥರು ಪ್ರತಿಭಟನೆ ನಡೆಸಿ ತಕ್ಷಣವೇ ಹುಲಿಯನ್ನು ಹಿಡಿಯುವಂತೆ ಒತ್ತಾಯಿಸಿದರು.

ಇದರ ಬೆನ್ನಲ್ಲೇ ಅರಣ್ಯ ಇಲಾಖೆ ತಕ್ಷಣ ಕ್ರಮ ಕೈಗೊಂಡಿದ್ದು, ಶುಕ್ರವಾರ ಮುಂಜಾನೆ ಆರಂಭವಾದ ಕೂಂಬಿಂಗ್ ಮತ್ತು ಸೆರೆ ಕಾರ್ಯಾಚರಣೆಯಲ್ಲಿ ಒಟ್ಟು 76 ಕಾಡಾನೆಗಳು ಭಾಗಿಯಾಗಿದ್ದವು.

"ನಾವು ಸಂಘರ್ಷವಿದ್ದ ಪ್ರದೇಶದಾದ್ಯಂತ ಕ್ಯಾಮೆರಾ ಟ್ರ್ಯಾಪ್‌ಗಳನ್ನು ಇರಿಸಿದ್ದೆವು ಮತ್ತು ಸಂಘರ್ಷದ ವಲಯದಲ್ಲಿ ಹುಲಿ ತಿರುಗಾಡುತ್ತಿರುವುದು ಕಂಡುಬಂದಿದೆ.

ಕಾರ್ಮಿಕನನ್ನು ಕೊಂದ ಹುಲಿ ಮತ್ತು ತಿರುಗಾಡುತ್ತಿದ್ದ ಹುಲಿಯ ಛಾಯಾಚಿತ್ರಗಳನ್ನು ತಾಳೆ ಹಾಕಲಾಗಿದೆ ಎಂದು ವಿರಾಜಪೇಟೆ ಡಿಸಿಎಫ್ ಜಗನ್ನಾಥ್ ತಿಳಿಸಿದ್ದಾರೆ.

## ನಿಮ್ಮ ಕೆಲಸ, ಕಾರ್ಯ ಮಾಡುವ, ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸುವವರನ್ನು ಆಯ್ಕೆ ಮಾಡಿ: ಸಚಿವ ಸತೀಶ್ ಜಾರಕಿಹೊಳಿ

ರಾಯಬಾಗ: ನಿಮ್ಮ ಕೆಲಸ, ಕಾರ್ಯಗಳನ್ನು ಮಾಡುವ, ನಿಮ್ಮ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸುವವರನ್ನು ನೀವು ಆಯ್ಕೆ ಮಾಡಬೇಕು ಹೊರತು ಸಂಸದರಾಗಿ ಆಯ್ಕೆಯಾಗಿ ನಿಮ್ಮ ಊರಿಗೆ ಒಂದೇ ಒಂದು ಬಾರಿಯೂ ಭೇಟಿ ನೀಡದ ಹಾಲಿ ಸಂಸದ ಅಣ್ಣಾಸಾಬ್ ಜೊಲ್ಲೆಯವರಂತವರನಲ್ಲ ಎಂದು ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ರಾಯಬಾಗ ತಾಲೂಕಿನ ಕುಡಚಿ ವಿಧಾನಸಭಾ ಕ್ಷೇತ್ರದ ಇಟ್ನಾಳ, ಖಣದ–ಾಳ, ಕಟಕಭಾವಿ, ಬೆಂಡವಾಡ, ಹಾಗೂ ಮಂಟೂರ ಗ್ರಾಮದಲ್ಲಿ ಹಮ್ಮಿಕೊಂಡಿದ ಕಾಂಗ್ರೆಸ್ ಕಾರ್ಯಕರ್ತರ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಹಾಲಿ ಸಂಸದ–ರಿಗೆ ಇಟನಾಳ, ಖಣದಾಳ, ಕಟಕಭಾವಿ, ಬೆಂಡವಾಡ ಹಾಗೂ ಮಂಟೂರು ಗ್ರಾಮಗಳು ಎಲ್ಲಿವೇ ಎಂಬುವುದೇ ಗೊತ್ತಿಲ್ಲವೆಂದು ಹಾಲಿ ಸಂಸದ ಜೊಲ್ಲೆ ವಿರುದ್ದ ವಾಗ್ದಾಳಿ ನಡೆಸಿದರು.

ನಮ್ಮ, ನಿಮ್ಮ ಸಂಬಂಧ ಕಳೆದ ಮೂವತ್ತು ವರ್ಷಗಳ ಸಂಬಂಧ. ದೆಹಲಿಯಲ್ಲಿ ಏನಾಯಿತು, ಬೆಂಗಳೂರಿನಲ್ಲಿ ಏನಾಯಿತು ಎನ್ನುಕ್ಕಿಂತ ಹಿಂದೆ ನಿಮ್ಮ ಹಳ್ಳಕ್ಕೆ ಎಸ್ಕೇಪ್ ಇದ್ದಿದ್ದಿಲ್ಲ. ಎಸ್ಕೇಪ್ ನಿರ್ಮಿಸುವ ಮೂಲಕ ಘಟಪ್ರಭಾ ನದಿಗೆ ಜೋಡಿಸುವ ಮೂಲಕ ಈ ಭಾಗಕ್ಕೆ ನೀರಾವರಿ ವ್ಯವಸ್ಥೆಯನ್ನು ಮಾಡಿದ್ದೇವೆ. ನಿಮ್ಮ ಅನುಕೂಲಕ್ಕೆ ತಕ್ಕಂತೆ ನೀರನ್ನು ಬಿಡುವ ಕೆಲಸ 30 ವರ್ಷಗಳಿಂದ ಮಾಡುತ್ತಿದ್ದೇವೆ. ನಮ್ಮ ಕೆಲಸವನ್ನು ಹತ್ತಿರದಿಂದ ಕಂಡ ನೀವು ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಬೆಂಬಲಿಸಬೇಕೆಂದು ಮನವಿ ಮಾಡಿದರು.

ಬಿಜೆಪಿಯವರಿಗೆ ಸುಭದ್ರ, ಜನಪರ ಹಾಗೂ ಬಡವರ ಪರವಾದ ಸರ್ಕಾರ ಕೊಡಲು ಸಾಧ್ಯವಾಗಲಿಲ್ಲ. ಪಕ್ಷದ ಕಾರ್ಯಕರ್ತರು ಪ್ರಧಾನಿ ಮೋದಿಯವರ ವೈಫಲ್ಯಗಳನ್ನು ಮತದಾರರಿಗೆ ತಿಳಿಸುವ ಮೂಲಕ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವಂತೆ



ತಿಳಿಸಬೇಕೆಂದರು.

ನರೇಂದ್ರ ಮೋದಿ ಎರಡು ಬಾರಿ ಈ ಪ್ರಧಾನಿಯಾದರು. ಗುಜರಾತ್ ಮಾದರಿ ಅಭಿವೃದ್ಧಿ ಮಾಡಿಬಿಡುತ್ತೇವೆ ಎಂದು ಹೇಳಿದ್ದರು. ಆದರೆ, ಪ್ರಮುಖ ಭರವಸೆಗಳನ್ನು ಕೂಡ ಈಡೇರಿಸಲಿಲ್ಲ, ಪ್ರತಿಯೊಬ್ಬರಿಗೂ 15 ಲಕ್ಷ ರೂ. ಕೊಡುತ್ತೇನೆ ಎಂದಿದ್ದರು. ಎರಡು ಕೋಟಿ ಯುವಕರಿಗೆ ಉದ್ಯೋಗ ಸೃಷ್ಟಿಸುತ್ತೇನೆಂದು ತಿಳಿಸಿದ್ದರು. ಆದರೆ, ಈಗ ಅದರ ಬಗ್ಗೆ ಮಾತಾಡುವುದೇ ಇಲ್ಲ ಎಂದು ವಾಗ್ದಾಳಿ ನಡೆಸಿದರು.

ಶಾಸಕ ಮಹೇಂದ್ರ ತಮ್ಮಣ್ಣವರ್ ಮಾತನಾಡಿ, ವಿಧಾನಸಭೆ ಚುನಾವಣೆಯಲ್ಲಿ ಇಟನಾಳ ಗ್ರಾಮಸ್ಥರು 289 ಹೆಚ್ಚಿನ ಮತಗಳನ್ನು ನೀಡಿದ್ದಿರಿ. ಲೋಕಸಭಾ ಚುನಾವಣೆಯಲ್ಲು ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಹೆಚ್ಚಿನ ಮತಗಳನ್ನು ನೀಡಬೇಕೆಂದರು.

ದೇಶದಲ್ಲಿ ಕಳೆದ ಹತ್ತು ವರ್ಷಗಳಿಂದ ಯಾವುದೇ ಜನಪರ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು ತರಲಿಲ್ಲ. ನೀರಾವರಿಗೆ ಸಂಬಂಧಿಸಿದಂತೆ ದೇಶದಲ್ಲಿ ಒಂದೇ ಒಂದು ಡ್ಯಾಮ್ ಕಟ್ಟಲಿಲ್ಲ. ನಮ್ಮ ಭಾಗದಲ್ಲಿ ಒಂದು ಕೆನಾಲ್ ಕವಲಿಯೂ ನಿರ್ಮಿಸಲಿಲ್ಲ. ಇನ್ನು 70 ವರ್ಷದಲ್ಲಿ ಕಾಂಗ್ರೆಸ್ ಪಕ್ಷ ಏನು ಮಾಡಿದೆ ಎಂದು ಬಿಜೆಪಿಯವರು ಪ್ರಶ್ನಿಸುತ್ತಾರೆ. ಬಿಜೆಪಿಯವರ ಪ್ರಶ್ನೆಗೆ ಜನತೆಯ ಉತ್ತರ ನೀಡಬೇಕು ಹೇಳಿದರು.

ಕುಡಚಿ ಮತಕ್ಷೇತ್ರಕ್ಕೆ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಲೋಕೋಪಯೋಗಿ ಇಲಾಖೆಯಿಂದ 46 ಕೋಟಿ ರೂಪಾಯಿ ಅನುದಾನ ನೀಡಿದ್ದಾರೆ. ಇಟನಾಳ ಗ್ರಾಮದಲ್ಲಿಯೇ 80 ಲಕ್ಷ ರೂ. ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. 240 ಮನೆಗಳನ್ನು ಮಂಜೂರು ಮಾಡಲಾಗಿದ್ದು, ಜಿಪಿಎಸ್ ಕೂಡ ಮಾಡಲಾಗಿದ್ದು, ಈ ಎಲ್ಲಾ ಕಾಮಗಾರಿಗಳಿಗೆ ಚುನಾವಣೆ ಮುಗಿದ ಬಳಿಕ ಕಾರ್ಯಾರಂಭ ಮಾಡಲಾಗುವುದೆಂದು ತಿಳಿಸಿದರು.

ಐದು ಗ್ಯಾರಂಟಿಗಳಿ 58 ಸಾವಿರ ಕೋಟಿ ರೂ. ರಾಜ್ಯ ಸರ್ಕಾರ ವೆಚ್ಚ ಮಾಡುತ್ತಿದೆ. ಸರ್ವ ಧರ್ಮದವರ ಪ್ರಗತಿಯೇ ಕಾಂಗ್ರೆಸ್ ಪಕ್ಷದ ಗುರಿಯಾಗಿದ್ದು, ಹೀಗಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಶ್ಯಾಮ್ ಘಾಟಗೆ, ಕಾಂಗ್ರೆಸ್ ಪಕ್ಷದ ಮುಖಂಡರಾದ ಅರ್ಜುನ್ ನಾಯಕವಾಡಿ, ಡಿ.ಎಸ್. ನಾಯಕ, ಸಂಜು ಬಾನೆ, ಮುತ್ತಪ್ಪಾ ಡಾಂಗೆ, ಮಹಾದೇವ ಮಗದುಮ್, ರವಿ ಸುಣಧೋಳಿ, ಮಹಾದೇವ ಮಾರಾಪುರ, ಲಕ್ಷ್ಮಣ ಪೊಲೀಸ್ ಪಾಟೀಲ್, ರಮೇಶ ಪಾಟೀಲ್, ಮೊಬಾರಕ್ ಪಚ್ಛಾಪುರ, ಭೀಮಪ್ಪ ಪಾಟೀಲ್, ಈರಪ್ಪಾ ಬಡಿಗೇರ, ಭೀಮು ಬದನೆಕಾಯಿ, ದಸ್ತಗಿರಿ ಕಾಗವಾಡೆ, ಮಹಾದೇವ ಮಾದರ, ಮಲಕಾರಿ ಅರಬಾವಿ, ಅಮೀತ್ ಘಾಟಗೆ ಸೇರಿದಂತೆ ಹಲವು ಕಾಂಗ್ರೆಸ್ ಕಾರ್ಯಕರ್ತರು, ಅಪಾರ ಸಂಖ್ಯೆಯ ಮಹಿಳೆಯರು, ಯುವಕರು ಇದ್ದರು.

# ರಾಮದುರ್ಗ ವಿಧಾನ ಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಭರ್ಜರಿ ಪ್ರಚಾರ

ರಾಮದುರ್ಗ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಶುಕ್ರವಾರ ದಿನವಿಡೀ ರಾಮದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಸಂಚ–ರಿಸಿದರು. ರಾಮದುರ್ಗದ ಹಲಗತ್ತಿ, ಲಿಂಗದಾಳ, ಇಡಗಲ್, ಚಿಕ್ಕತಡಸಿ ಹಾಗೂ ಹಂಪಿಹೊಳಿ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಮತಯಾಚಿಸಿದರು.

**ಸುಳ್ಳು ಹೇಳೋದೆ ಬಿಜೆಪಿಗರ ಕೆಲಸ:**

ಕಾಂಗ್ರೆಸ್ ಪಕ್ಷದ ಎಂದರೆ ಬದ್ಧತೆ, ಕೊಟ್ಟ ಮಾತನ್ನು ಎಂದೂ ತಪ್ಪೋದಿಲ್ಲ. ಸುಳ್ಳು ಹೇಳುವುದರಲ್ಲಿ ಬಿಜೆಪಿಗರು ನಿಸ್ಸಿಮರು. ಕೊಟ್ಟ ಮಾತನ್ನು ಎಂದೂ ನಡೆಸಿಕೊಟ್ಟಿಲ್ಲ. ಬಡವರ ಬಗ್ಗೆ ಕಾಳಜಿ ಹೊಂದಿರುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು. ನಾವು ಕಾಂಗ್ರೆಸ್ ಪಕ್ಷದ ಅಭಿವೃದ್ಧಿ, ಸಾಧನೆಗಳನ್ನು ನೋಡಿಕೊಂಡು ಮತ ಕೇಳುತ್ತೇವೆ ಎಂದು ಹೇಳಿದರು.

ರಾಮದುರ್ಗ ತಾಲೂಕಿನಲ್ಲಿ 53 ಸಾವಿರ ಕುಟುಂಬಗಳಿಗೆ ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಸಿಗುತ್ತಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಹಿರಿಯ ಶಾಸಕರು ಆಗಿರುವ ಅಶೋಕ್ ಪಟ್ಟಣ್ ಅವರ ಸಹಕಾರದೊಂದಿಗೆ ಸರ್ಕಾರದಲ್ಲಿ ಮಂತ್ರಿಯಾಗಿರುವೆ. ಜಿಲ್ಲೆಯ ಸಮಗ್ರ ಅಭಿವೃದ್ಧಿಯೇ ನಮ್ಮ ಗುರಿ ಎಂದು ಹೇಳಿದರು.

ಐದು ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಬೇಕು ಅಂತ ಬಿಜೆಪಿಯವರು ಕಾಂಗ್ರೆಸ್ ಮೇಲೆ ಕೇಸ್ ದಾಖಲು ಮಾಡಿದ್ದಾರೆ. ಕರೋನಾ ಬಂದ್ಮೇಲೆ



ಜನ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅಗತ್ಯ ವಸ್ತುಗಳ ಬೆಲೆ ಗಗನಕ್ಕೇ–ರಿದೆ. ಇಂಥ ಸ್ಥಿತಿಯಲ್ಲಿ ಬಡಜನರ ಒಳಿತಿಗಾಗಿ ಕಾಂಗ್ರೆಸ್ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಕೊಟ್ಟ ಮಾತಿನಂತೆ ನಡೆದಿದ್ದೇವೆ ಎಂದು ಹೇಳಿದರು.

ಅಂಗನವಾಡಿ ಕೇಂದ್ರಗಳನ್ನು ಆರಂಭಿಸಿದ್ದು, ಆಶಾ ಕಾರ್ಯಕರ್ತರ ಸಂಬಳ ಜಾಸ್ತಿ ಮಾಡಿದ್ದು ಕೂಡ ಕಾಂಗ್ರೆಸ್ ಸರ್ಕಾರ. ಬ್ರಿಟಿಷರು ದೇಶವನ್ನು ಕೊಳ್ಳೆ ಹೊಡೆದು ಹೋದಾಗ ನಮ್ಮಲ್ಲಿ ಸೂಜಿ ತಯಾ–ರಿಸಲೂ ಆಗುತ್ತಿರಲಿಲ್ಲ. ಈಗ ಚಂದ್ರಯಾನಕ್ಕೆ ತಲುಪುವ ಮಟ್ಟಕ್ಕೆ ತಲುಪಿದ್ದೇವೆ.

ಅದಕ್ಕೆ ಕಾರಣ ಕಾಂಗ್ರೆಸ್ ಪಕ್ಷ. ಮೃಣಾಲ್ ಹೆಬ್ಬಾಳ್ಕರ್ ಅವರಿಗೂ ಒಂದು ಅವಕಾಶ ಕೊಡಿ. ನಿಮ್ಮ ಮತವೇ ಗ್ಯಾರಂಟಿಗಳಿಗೆ ಸಿಗುವ ಬಲ. ಮನೆ ಮಗ ಬೇಕಾ ಬೇರೆಯವರು ಬೇಕಾ ನೀವೇ ಯೋಚಿಸಿ ಎಂದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

**ಅಭಿವೃದ್ಧಿಗೆ ಮತ ನೀಡಿ:**

ಕಾಂಗ್ರೆಸ್ ಪಕ್ಷ ಸದಾ ಅಭಿವೃದ್ಧಿ ಬಗ್ಗೆ ಚಿಂತಿಸುವ ಪಕ್ಷ ಕಾಂಗ್ರೆಸ್. ಕಳೆದ 10 ತಿಂಗಳಿಂದ ಕಾಂಗ್ರೆಸ್ ಮಾಡಿರುವ ಸಾಧನೆಗಳನ್ನು ನೋಡಿ ಮತ ನೀಡಿ. ಮೃಣಾಲ್ ಹೆಬ್ಬಾಳ್ಕರ್ ಇನ್ನೂ ಯುವಕನಿದ್ದು, ಒಳ್ಳೆಯ ಅಭ್ಯರ್ಥಿ ಆಗಿದ್ದು ಹೆಚ್ಚಿನ ಮತ ನೀಡಿ ಗೆಲ್ಲಿಸಬೇಕು ಎಂದು ಶಾಸಕ ಅಶೋಕ್ ಪಟ್ಟಣ ಕರೆ ನೀಡಿದರು.

ರಾಮದುರ್ಗ ತಾಲೂಕಿನಲ್ಲಿ ಕನಿಷ್ಟ 30–40 ಸಾವಿರ ಮತಗಳ ಲೀಡ್ ಕೊಡಲು ಸಂಕಲ್ಪ ಮಾಡೋಣ ಎಂದು ಪಟ್ಟಣ ವಿನಂತಿಸಿದರು.

ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಮಾತನಾಡಿ, ಕೆಲಸ ಮಾಡುವ ಉತ್ಸಾಹದಿಂದ, ಹಲವು ಕನಸು ಕಟ್ಟಿಕೊಂಡು ಕಣಕ್ಕಿಳಿದಿದ್ದೇನೆ. ಎಲ್ಲರ ಸಲಹೆ, ಮಾರ್ಗದರ್ಶನದೊಂದಿಗೆ ಜಿಲ್ಲೆಯ ಅಭಿವೃದ್ಧಿಗೆ ಕೆಲಸ ಮಾಡುತ್ತೇನೆ. ತಮ್ಮ ಅಮೂಲ್ಯ ಮತ ನೀಡುವ ಮೂಲಕ ಅವಕಾಶ ಮಾಡಿಕೊಡಿ ಎಂದು ವಿನಂತಿಸಿದರು.

ಕಾಂಗ್ರೆಸ್ ಮುಖಂಡರಾದ ಪ್ರದೀಪ್ ಪಟ್ಟಣ್, ಮಂಜುಳಾ ದೇವರೆಡ್ಡಿ, ಸುನಂದಾ ರಾ ದೊಡ್ಡವಾರ್, ಜಿ.ಬಿ.ರಂಗನಗೌಡ, ವೈ.ಬಿ.ಮುಧೋಳ, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷೆ ಪಾರ್ವತೆವ್ವ ಮೇಟಿ, ಸುರೇಶ್ ಪೂಜೇರ್ ಬಿ.ಎಸ್.ಪಾಟೀಲ, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಎಫ್.ಟಿ.ಕೊಳಚಿ, ಎಚ್.ಎಂ.ಹಿರೇಮಠ, ಎಸ್.ಎಚ್.ವಗ್ಗರ್, ವೈ.ಎಚ್ ನೆಲಗುಡ್, ತಾಲೂಕು ಪಂಚಾಯತಿ ಮಾಜಿ ಅಧ್ಯಕ್ಷರಾದ ಪುಂಡಲಿಕ್ ಹಳ್ಳಿ, ಗ್ರಾಮ ಪಂಚಾಯತಿ ಅಧ್ಯಕ್ಷರಾದ ರಮೇಶ್ ಹೊಳೆನೂರು, ಶಿವಯೋಗಿ ಗೊಂದಿ, ಹನುಮಂತ ನುಂಗಾರಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ಆರೋಗ್ಯಕರ ಆಯುಷ್ ಪಾನಕ ಪರಿಚಯ

## ಬೇಸಿಗೆಯಲ್ಲಿ ಆರೋಗ್ಯ ವೃದ್ದಿಗೆ ಹುಣಸೆ ಹಣ್ಣಿನ ಪಾನಕ ಸೇವನೆ ಉತ್ತಮ: ಜಿ.ಪಂ ಸಿಇಒ ರಾಹುಲ್ ಶಿಂಧೆ

ಬೆಳಗಾವಿ: ಅತಿಯಾಗಿ ಬಿಸಿಲಿನ ತಾಪ ಹೆಚ್ಚುತ್ತಿರುವುದ–ರಿಂದ ಸಾರ್ವಜನಿಕರು ಆಯುಷ್ ಇಲಾಖೆ ಪರಿಚಯಿಸಿರುವ ಹುಣಸೆ ಹಣ್ಣಿನ ಚಿಂಚಾ ಪಾನಕವನ್ನು ಸೇವಿಸಿ ಬಾಯಾರಿಕೆ ನಿವಾರಿಸಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಅವರು ಹೇಳಿದರು.

ಹುಕ್ಕೇರಿ ತಹಶೀಲ್ದಾರ್ ಕಚೇರಿಯ ಆವರಣದಲ್ಲಿ ಗುರುವಾರ (ಏ.19) ಆಯುಷ್ ಇಲಾಖೆಯ ವತಿಯಿಂದ ರಾಷ್ಟೀಯ ಆಯುಷ್ ಅಭಿಯಾನಡಿ ಆರೋಗ್ಯಕರ ಚಿಂಚಾ ಪಾನಕ (ಹುಣಸೆ ಹಣ್ಣಿನ ಪಾನಕ)ವನ್ನು ಕರ್ತವ್ಯನಿರತ ಕಚೇರಿಯ ಸಿಬ್ಬಂದಿಗೆ ವಿತರಿಸಿ



ಮಾತನಾಡಿದರು.

ಬಿಸಿಲಿನ ಧಗೆ ಕಡಿಮೆಯಾಗಿಲ್ಲ. ಮನೆಯಿಂದ ಹೊರಗೆ ಕಾಲಿಡುವುದು ಕೂಡ ಸಾಧ್ಯವಾಗುತ್ತಿಲ್ಲ. ಇಂತಹ ಸಮಯದಲ್ಲಿ ಬಾಯಾರಿಕೆ ನೀಗಿಸಿಕೊಳ್ಳಲು ಜನ ಆರೋಗ್ಯಕರ ಪಾನಕ ಸೇವಿಸಬೇಕು. ಬೇಸಿಗೆಯ ಧಗೆಯಿಂದ ದೇಹವನ್ನು ತಣಿಸಲು ಹುಣಸೆ ಹಣ್ಣಿನ ನೈಸರ್ಗಿಕ ಪಾನಕ ಅತ್ಯುತ್ತಮವಾಗಿವೆ ಎಂದು ತಿಳಿಸಿದರು.

ಬಾಯಾರಿಕೆ ನಿವಾರಣೆಗೆ, ದೇಹವನ್ನು ತಂಪುಗೊಳಿಸಲು ನಾವು ಮಾರ್ಕೆಟ್ ನಲ್ಲಿ ಸಿಗುವ ಅಡ್ಡಪರಿಣಾಮ ಬೀರುವ ತಂಪು ಪಾನೀಯಗಳನ್ನು ಸೇವಿಸುವುದು ಹೆಚ್ಚಾಗಿದೆ.

ಅಂತಹ ಜ್ಯೂಸ್ ಗಳ ಮೊರೆ ಹೋಗದೆ ಆರೋಗ್ಯಕರ ಚಿಂಚಾ ಪಾನಕ ಸೇವಿಸುವುದು ಉತ್ತಮ ಇದರಿಂದ

ನಮ್ಮ ದೇಹದಲ್ಲಿ ಹೆಚ್ಚಿರುವ ಉಷ್ಣತೆಯನ್ನು ಕಡಿಮೆ ಮಾಡಲು ಸಹಕಾರಿಯಾಗಲಿದೆ ಎಂದು ಜಿ.ಪಂ ಸಿಇಒ ರಾಹುಲ ಶಿಂಧೆ ಅವರು ಸಲಹೆ ನೀಡಿದರು.

ಇದೇ ವೇಳೆ ಜಿಲ್ಲಾ ಆಯುಷ್ ಅಧಿಕಾರಿ ಶ್ರೀಕಾಂತ ಸುಣಧೊಳ್ಳಿ ಅವರು ಹುಣಸೆ ಹಣ್ಣಿನ ಚಿಂಚಾ ಪಾನಕವನ್ನು ಸೇವನೆಯಿಂದ ಆರೋಗ್ಯಕರ ಪ್ರಯೋಜನಗಳ ಕುರಿತು ವಿವರಿಸಿದರು.

ಈ ಸಂಧರ್ಬದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಅಡವಿಮಠ, ಯೋಜನಾ ನಿರ್ದೇಶಕ ಡಾ. ಕೃಷ್ಣರಾಜು, ಲೆಕ್ಕಾಧಿಕಾರಿ ಗಂಗಾ ಹಿರೇಮಠ, ಆಯುಷ್ ಇಲಾಖೆ ಡಾ. ಚಂದ್ರಶೇಖರ್ ಜಂಬಗಿ, ಸರೋಜಿನಿ ಮಹಾನಕರ, ಸಂಜೀವಕುಮಾರ ದಾನೋಳಿ, ಗಿರೀಶ ಪಶುಪತಿಮಠ, ರೋಹಿಣಿ ಕಿಣಗಿ, ಪೊಲೀಸ್ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜುಲೈ 13 ರಂದು ಲೋಕ ಅದಾಲತ

ಬೆಳಗಾವಿ: ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದ ಮೇರೆಗೆ ವೈವಾಹಿಕ ಕೌಟುಂಬಿಕ ಮತ್ತು ಪಾಲೂ ವಿಭಾಗಕ್ಕೆ, ಬ್ಯಾಂಕುಗಳಿಗೆ ಸಂಬಂಧಪಟ್ಟ ಪ್ರಕರಣಗಳು ಹಾಗೂ ಚೆಕ್ ಬೌನ್ಸ್, ಹಣಕಾಸಿನ ದಾವೆಗಳು, ಸಿವಿಲ್ ವ್ಯಾಜ್ಯಗಳು, ಮೋಟಾರ ವಾಹನ ಅಪಘಾತ ಪರಿಹಾರಕ್ಕೆ ಸಂಬಂಧಪಟ್ಟ ಪ್ರಕರಣಗಳು, ಕಂದಾಯ ಪ್ರಕರಣಗಳು, ಮತ್ತು ಇತರೆ ಎಲ್ಲಾ ರೀತಿಯ ರಾಜಿಯಾಗಬಹುದಾದಂತಹ ಪ್ರಕರಣಗಳ ಕುರಿತು ಜು.7 ರಂದು ಬೆಳಗ್ಗೆ 11 ಗಂಟೆಯಿಂದ ಜಿಲ್ಲಾ ಎಲ್ಲಾ ನ್ಯಾಯಾಧೀಶರು ಹಾಗೂ ವಕೀಲರ ಸಹಯೋಗದಲ್ಲಿ ಲೋಕ ಆದಾಲತನ್ನು ಹಮ್ಮಿಕೊಳ್ಳಲಾಗಿದೆ.

ಸದರಿ ನ್ಯಾಯಾಲಯಗಳಲ್ಲಿ ತನಿಖೆಗೆ ಬಾಕಿ ಇರುವ ಪ್ರಕರಣಗಳ ಕುರಿತು ಬೆಳಗಾವಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಧೀಶರಾದ ಗೌರವಾನ್ವಿತ ಎಲ್. ವಿಜಯಲಕ್ಷ್ಮೀ ದೇವಿ ಇವರ ಮಾರ್ಗದರ್ಶನದಲ್ಲಿ ಬೆಳಗಾವಿಯ ಎಲ್ಲಾ ನ್ಯಾಯಾಲಯಗಳಲ್ಲಿ ಹಾಗೂ ಎಲ್ಲಾ ತಾಲೂಕುಗಳ ನ್ಯಾಯಾಲಯಗಳಲ್ಲಿ ಜಿಲ್ಲಾ ಎಲ್ಲಾ ನ್ಯಾಯಾಧೀಶರು ಹಾಗೂ ವಕೀಲರ ಸಹಯೋಗದಲ್ಲಿ ಲೋಕ ಆದಾಲತನ್ನು ನಡೆಸಲಾಗುವುದು.

ಸದರಿ ಪ್ರಕರಣಗಳನ್ನು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ತಗೆದುಕೊಂಡು ರಾಜಿ ಸಂದಾನದ ಮುಖಾಂತರ ಇತ್ಯರ್ಥ ಪಡಿಸಲಾಗುವುದು. ಬ್ಯಾಂಕ್‌ಗಳು, ಕಕ್ಷಿದಾರರು ಹಾಗೂ ಜನಸಾಮಾನ್ಯರು ಈ ಅವಕಾಶವನ್ನು ಸದುಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಬೆಳಗಾವಿ ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರ ಅಥವಾ ತಾಲೂಕು ಕಾನೂನು ಸೇವಾ ಸಮಿತಿಗಳಯನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಜಿಲ್ಲಾ ಕಾನೂನು ಪ್ರಾಧಿಕಾರ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಪ್ರಕರನದಲ್ಲಿ ತಿಳಿಸಿದ್ದಾರೆ.

## ಲೋಕಸಭಾ ಚುನಾವಣೆ: ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಸಾಮಾನ್ಯ ವೀಕ್ಷಕರ,ಪೋಲಿಸ ವೀಕ್ಷಕರ ಆಗಮನ, ಸಾರ್ವಜನಿಕ ಭೇಟಿಗೆ ಲಭ್ಯ

ಬೆಳಗಾವಿ: ಲೋಕಸಭಾ ಚುನಾವಣೆ–2024 ರ ಹಿನ್ನೆಲೆಯಲ್ಲಿ 01–ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ ಚುನಾವಣಾ ಆಯೋಗವು ನಿಯೋಜಿಸಿರುವ ಸಾಮಾನ್ಯ ವೀಕ್ಷಕರು ಹಾಗೂ ಪೋಲಿಸ ವೀಕ್ಷಕರು ಆಗಮಿಸಿದ್ದು, ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

**01–ಚಿಕ್ಕೋಡಿ ಲೋಕಸಭಾ ಕ್ಷೇತ್ರ ಸಾಮಾನ್ಯ ವೀಕ್ಷಕರು:**

ಜಿ.ಎಸ್.ಪಾಂಡಾ ದಾಸ್(ಐ.ಎ.ಎಸ್), ಮೊಬೈಲ್ ಸಂಖ್ಯೆ–7349611395; ನಿಪ್ಪಾಣಿ, ಪಿಡಬ್ಲ್ಯುಡಿ ವಿ.ಐ.ಪಿ. ಸೂಟ್ ಸಂಖ್ಯೆ –1; ಸಾರ್ವಜನಿಕ ಭೇಟಿ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆ.

**ಪೊಲೀಸ್ ವೀಕ್ಷಕರ ನೇಮಕ:**

01–ಚಿಕ್ಕೋಡಿ ಲೋಕಸಭಾ, 02–ಬೆಳಗಾವಿ ಮತ್ತು ಕ್ಷೇತ್ರಗಳಿಗೆ ಪೊಲೀಸ್ ವೀಕ್ಷಕರಾಗಿ ಹಿರಿಯ ಐಪಿಎಸ್ ಅಧಿಕಾರಿ ಪವನಕುಮಾರ್, ಮೊಬೈಲ್ ಸಂಖ್ಯೆ–8123241395; ಬೆಳಗಾವಿ ಪಿಡಬ್ಲ್ಯುಡಿ ಹೊಸ ಐ.ಬಿ. ಕೊಠಡಿ ಸಂಖ್ಯೆ –4; ಸಾರ್ವಜನಿಕ ಭೇಟಿ ಸಮಯ: ಬೆಳಿಗ್ಗೆ 10 ರಿಂದ 11 ಗಂಟೆ.

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಸಾರ್ವಜನಿಕರು ನಿಗದಿತ ಸಮಯ ಹಾಗೂ ಸ್ಥಳದಲ್ಲಿ ಸಾಮಾನ್ಯ ವೀಕ್ಷಕರು ಮತ್ತು ಪೊಲೀಸ್ ವೀಕ್ಷಕರನ್ನು ಭೇಟಿ ಮಾಡಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.10 ರಂದು ವಿದ್ಯುತ್ ವ್ಯತ್ಯಯ

ಬೆಳಗಾವಿ: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಮೊದಲನೇಯ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಏ.20 ರಂದು ಬೆಳಗ್ಗೆ 10 ಘಂಟೆಯಿಂದ ಸಾಯಂಕಾಲ 4 ಘಂಟೆಯವರೆಗೆ 110 ಕೆ.ವ್ಹಿ. ಹುದಲಿ ಉಪಕೇಂದ್ರದಿಂದ ಸರಬರಾಜುನಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹುದಲಿ, ನಂದಿ ಕುಡಿಯುವ ನೀರಿನ ಘಟಕ, ಕುಮರಿ, ರಂಗದೋಳಿ, ತುಮ್ಮರಗುದ್ದಿ, ಸೋಮನಟ್ಟಿ, ಕಬಲಾಪೂರ, ಚಂದೂರ, ಖನಗಾಂವ ಕೆ.ಎಚ್, ಖನಗಾಂವ ಬಿ.ಕೆ, ಅಷ್ಟೆ, ಮುಚ್ಚಂಡಿ, ಕಲಕಾಂಬ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜುನಲ್ಲಿ ವ್ಯತ್ಯಯವಾಗಲಿದೆ ಎಂದು ಕಾರ್ಯ ಮತ್ತು ಪಾಲನಾ ಗ್ರಾಮೀಣ ವಿಭಾಗ, ಹುವಿಸಕಂನಿ ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಾಯ್ ಪೆ ಚರ್ಚಾ ಮೂಲಕ ಮತ ಬೇಟೆ ನಡೆಸಿದ ಜಗದೀಶ್ ಶೆಟ್ಟರ್



ಬೆಳಗಾವಿ: ಲೋಕಸಭಾ ಚುನಾವಣೆಯ ಅಂಗವಾಗಿ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಇಂದು ಬೆಳ್ಳಂ ಬೆಳಗ್ಗೆ ಬಸವ ಕಾಲೋನಿಯಲ್ಲಿ ಚಾಯ್ ಪೇ ಚರ್ಚಾ ಕಾರ್ಯಕ್ರಮದ ಮೂಲಕ ಸಾರ್ವಜನಿಕರನ್ನು ಭೇಟಿ ಮಾಡಿ, ಮತಯಾಚನೆ ನಡೆಸಿದ್ದಾರೆ.

ಪ್ರಚಾರದ ವೇಳೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ವಿಕಸಿತ ಭಾರತದತ್ತ ದೇಶ ದಾಪುಗಾಲು ಹಾಕುತ್ತಿದಿ, ಮೋದಿಯವರು ಪ್ರಧಾನಿಯಾದ ಮೇಲೆ ಎಲ್ಲಾ ಕ್ಷೇತ್ರದಲ್ಲಿ ಅಭಿವೃದ್ಧಿ ಹೊಂದಿದೆ. ದೇಶವನ್ನು ಇನ್ನು ಹೆಚ್ಚು ಅಭಿವೃದ್ಧಿ ಮಾಡಲು ಮೂರನೆ ಸಲ ಮೋದಿಯವರು ಪ್ರಧಾನಿ ಮಾಡಬೇಕು. ಆ ನಿಟ್ಟಿನಲ್ಲಿ ಬಿಜೆಪಿಗೆ ಮತ ನೀಡಿ ಗೆಲ್ಲಿಸಬೇಕು ಎಂದು ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಬಸವ ಕಾಲೋನಿಯ ಪ್ರಮುಖರಾದ ಡಾ. ರವಿ ಪಾಟೀಲ್, ಕೆ.ಐ. ಗಾಣಗೇರ, ಎಸ್.ಆರ್. ಪಾಟೀಲ, ಮೋಹನ ಹೂಗಾರ, ಬಸಪ್ಪ ಚಿಕಲದಿನ್ನಿ, ಪ್ರಕಾಶ ಕೋತ, ಪ್ರಮೋದ ಕೋತ, ಬಿ.ಎಂ. ಮುಗದುಮ್, ಚೇತನ ಬಡಿಗೇರ, ಆದರ್ಶ ಪೈಲ್ವಾನ್, ಸುರೇಶ ಬಂಡೆಪ್ಪನವರ, ರಮೇಶ ಪಾಟೀಲ್ ಹಾಗೂ ಇತರರು ಉಪಸ್ಥಿತರಿದ್ದರು.



ಧಾರವಾಡ ಲೋಕಸಭಾ ಮತಕ್ಷೇತ್ರದ ಭಾರತೀಯ ಪ್ರಜೆಗಳ ಕಲ್ಯಾಣ ಪಕ್ಷದ ಅಭ್ಯರ್ಥಿಯಾಗಿ ಮಹಮ್ಮದ ಇಸ್ಮಾಯಿಲ್ ಮುಕ್ತಿ ಅವರು ಧಾರವಾಡ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ದಿವ್ಯ ಪ್ರಭು ಅವರಿಗೆ ಇಂದು ಬೆಳಿಗ್ಗೆ ನಾಮಪತ್ರ ಸಲ್ಲಿಸಿದರು.

# ಮಕ್ಕಳಿಗೆ ಬಾಲ್ಯದಲ್ಲೇ ಸಂಸ್ಕಾರ ನೀಡಿ: ಡಾ. ಅಲ್ಲಮಪ್ರಭು ಸ್ವಾಮೀಜಿ

ಬೆಳಗಾವಿ: ಆಧುನಿಕತೆಯ ಬರಾಟೆ, ಟಿ.ವಿ ಹಾಗೂ ಮೊಬೈಲ್ ಗಳ ಹಾವಳಿಯಿಂದಾಗಿ ಇಂದಿನ ಯುವಕರು ಸಂಸ್ಕೃತಿ, ಸಂಸ್ಕಾರಗಳಿಂದ ವಿಮುಖರಾಗುತ್ತಿದ್ದು, ಬಾಲ್ಯದಲ್ಲಿಯೇ ಅವರಲ್ಲಿ ಸಂಸ್ಕಾರ ನೀಡಬೇಕು ಎಂದು ನಾಗನೂರು ರುದ್ರಾಕ್ಷಿ ಮಠದ ಅಲ್ಲಮಪ್ರಭು ಸ್ವಾಮೀಜಿ ಅಭಿಪ್ರಾಯಪಟ್ಟರು.

ಅವರು ಇತ್ತೀಚಿಗೆ ಶ್ರೀ ಸಿದ್ದರಾಮೇಶ್ವರ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ 8 ರಿಂದ 12 ನೇ ತರಗತಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಶರಣ ಸಂಸ್ಕೃತಿ ಸಂಸ್ಕಾರ ಶಿಬಿರವನ್ನು ಉದ್ಘಾಟಿಸಿ ಆಶೀರ್ವಚನವನ್ನು ನೀಡಿದರು.

ವಿದ್ಯಾರ್ಥಿಗಳಲ್ಲಿ ಎಳೆಯ ವಯಸ್ಸಿನಲ್ಲಿಯೇ ಕಾಯಕ, ದಾಸೋಹ ಹಾಗೂ ಪ್ರಸಾದದ ಮಹತ್ವ ತಿಳಿಸಿ ಕೊಡುವುದರ ಜೊತೆಗೆ ವಚನ ಸಾಹಿತ್ಯ ಪರಿಚಯ ಮಾಡಿಕೊಟ್ಟು ಅವರಲ್ಲಿ




ಶಿಸ್ತು, ನಿಯಮ ಪಾಲನೆ, ಹೃದಯ ವೈಶಾಲ್ಯತೆ, ಸಮರ್ಪಣಾಭಾವ ಹಾಗೂ ದೇಶಭಕ್ತಿಯಂತಹ ಉದಾತ್ತ ಮೌಲ್ಯಗಳನ್ನು ಬೆಳೆಸಬೇಕೆಂಬ ಉದ್ದೇಶದಿಂದ ಶಿಬಿರ ಹಮ್ಮಿಕೊಂಡಿದ್ದು, ನಾಡಿನ ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ವೇದಿಕೆಯ ಮೇಲೆ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಕೆ.ಬಿ. ಹಿರೇಮಠ, ಮುಖ್ಯೋಪಾಧ್ಯಾಯ ಮಡಿವಾಳಪ್ಪ ಸಂಗೊಳ್ಳಿ, ಶಿಕ್ಷಕ ಎಮ್. ಬಿ. ತೋರಣಗಟ್ಟಿ ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಶಿಕ್ಷಕ ಮನೋಹರ ಉಳ್ಳಾಗಡ್ಡಿ ಸ್ವಾಗತಿಸಿದರು ರಾಜಶೇಖರ ಪಾಟೀಲ ನಿರೂಪಿಸಿ ವಂದಿಸಿದರು.

# ಮಲಗಿದ್ದಲ್ಲೇ ಒಂದೇ ಕುಟುಂಬದ ನಾಲ್ವರ ಹತ್ಯೆ



ಗದಗ: ಮಲಗಿದ್ದಲ್ಲೇ ಒಂದೇ ಕುಟುಂಬದ ನಾಲ್ವರನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಗದಗ ಜಿಲ್ಲೆಯ ದಾಸರ ಓಣಿಯಲ್ಲಿ ನಡೆದಿದೆ. ನಗರಸಭೆ ಉಪಾಧ್ಯಕ್ಷೆಯ ಪುತ್ರ ಸೇರಿದಂತೆ ನಾಲ್ವರನ್ನು ಭೀಕರವಾಗಿ ಕೊಚ್ಚಿ ಕೊಲೆ ಮಾಡಲಾಗಿದೆ.

ಮೃತರನ್ನು ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಪುತ್ರ ಕಾರ್ತಿಕ್ ಬಾಕಳೆ (27), ಪರಶುರಾಮ (55), ಪತ್ನಿ ಲಕ್ಷ್ಮೀ (45), ಪುತ್ರಿ ಆಕಾಂಕ್ಷಾ (16) ಎಂದು ಗುರುತಿಸಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಏಪ್ರಿಲ್ 17ರಂದು ಪ್ರಕಾಶ್ ಬಾಕಳೆ ಪುತ್ರ ಕಾರ್ತಿಕ್ ನ ಮದುವೆ ನಿಗದಿಪಡಿಸುವ ಸಂಬಂಧ ಕೊಪ್ಪಳದಿಂದ ಸಂಬಂಧಿಕರು ಆಗಮಿಸಿದ್ದರು.

ತಡರಾತ್ರಿ ಬಾಗಿಲು ಸದ್ದು ಕೇಳಿ ಅನುಮಾನಗೊಂಡ ಕುಟುಂಬಸ್ಥರು ಕೂಡಲೇ ಪೊಲೀಸರಿಗೆ ಕರೆ ಮಾಡಿದ್ದಾರೆ ಮಾಹಿತಿ ನೀಡಿದ್ದಾರೆ. ಪೊಲೀಸರಿಗೆ ಫೋನ್ ಮಾಡ್ತಾ ಇದ್ದಂತೆ ಎಚ್ಚೆತ್ತ ಆರೋಪಿಗಳು ಕೂಡಲೇ ಸ್ಥಳದಿಂದ ಪರಾರಿಯಾಗಿದ್ದಾರೆ.

ಸ್ಥಳ ಪರಿಶೀಲನೆ ನಡೆಸಲಾಗಿದ್ದು, ಸಿಸಿಟಿವಿಗಳನ್ನು ಪರಿಶೀಲನೆ ಮಾಡಲಾಗುತ್ತಿದೆ. ಸ್ಥಳಕ್ಕೆ ಶ್ವಾನದಳ, ಫೋರೆನ್ಸಿಕ್ ಟೀಂ ಭೇಟಿ ನೀಡಿದ್ದು ಪರಿಶೀಲನೆ ನಡೆಸುತ್ತಿದ್ದಾರೆ.

ಘಟನೆ ಸಂಬಂಧ ಕುಟುಂಬಸ್ಥರಿಂದ ಹೆಚ್ಚಿನ ಮಾಹಿತಿಯನ್ನು ಕಲೆ ಹಾಕಲಾಗುತ್ತಿದ್ದು, ಶೀಘ್ರದಲ್ಲೇ ಆರೋಪಿಗಳನ್ನು ಬಂಧಿಸುತ್ತೇವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ತಿಳಿಸಿದ್ದಾರೆ.

# ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಗೆಲುವು ಶತಸಿದ್ಧ: ಪ್ರಕಾಶ ಹುಕ್ಕೇರಿ

ಚಿಕ್ಕೋಡಿ: ಚಿಕ್ಕೋಡಿ ಲೋಕಸಭೆ ಕ್ಷೇತ್ರದಲ್ಲಿ ಕಾಂಗ್ರೆಸ್ ಗಾಳಿ ಬಿಸುತ್ತಿದೆ. ಅದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ, ಕಾಂಗ್ರೆಸ್ ಸರ್ಕಾರ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಕಾಂಗ್ರೆಸ್ಗೆ ಬೆಂಬಲ ನೀಡಬೇಕೆಂದು ಕರ್ನಾಟಕ ದೆಹಲಿ ವಿಶೇಷ ಪ್ರತಿನಿಧಿ ಹಾಗೂ ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ ಹೇಳಿದರು.

ಚಿಕ್ಕೋಡಿ–ಸದಲಗಾ ಮತಕ್ಷೇತ್ರದ ಚಿಕ್ಕೋಡಿ ತಾಲೂಕಿನ ಕೇರೂರ ಗ್ರಾಮದಲ್ಲಿ ಹಮ್ಮಿಕೊಂಡ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿದರು. ಕಳೆದ 30 ವರ್ಷಗಳಿಂದ ಚಿಕ್ಕೋಡಿ–ಸದಲಗಾ ಕ್ಷೇತ್ರದಲ್ಲಿ ಕಾಂಗ್ರೆಸ್ ತನ್ನ




ಅಸ್ತಿತ್ವ ಉಳಿಸಿಕೊಂಡು ಬಂದಿದೆ. ಈ ಚುನಾವಣೆಯಲ್ಲಿಯೂ ಕೂಡಾ ಲೋಕಸಭೆ ಕ್ಷೇತ್ರದ ಎಂಟು ವಿಧಾನಸಭೆ ಕ್ಷೇತ್ರದ ಪೈಕಿ ಚಿಕ್ಕೋಡಿ–ಸದಲಗಾ ಕ್ಷೇತ್ರದಲ್ಲಿ ಹೆಚ್ಚಿನ ಲಿಡ್ ಆಗಬೇಕಿದೆ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಮಾಡಿರುವ ಅಭಿವೃದ್ಧಿ ಕಾರ್ಯಕ್ಕೆ ಜನ ಹೆಚ್ಚಿನ ಮನ್ನಣೆ ನೀಡಲಿದೆ. ಸರ್ಕಾರ ಜಾರಿ ಮಾಡಿರುವ ಐದು ಗ್ಯಾರಂಟಿ ಯೋಜನೆಗಳು ಕಡು ಬಡವ–ರಿಗೆ ಮತ್ತು ಮಧ್ಯಮ ವರ್ಗದ ಜನ–ರಿಗೆ ಅನುಕೂಲವಾಗಿದೆ. ಗ್ಯಾರಂಟಿ ಯೋಜನೆಗೆ ಕಳೆದ ವರ್ಷ 36 ಸಾವಿರ ಕೋಟಿ ರೂ ಮತ್ತು ಈ ವರ್ಷ 56 ಸಾವಿರ ಕೋಟಿ ರೂ ಸರ್ಕಾರ ಮೀಸಲಿಟ್ಟಿದೆ. ಅರ್ಹ ಕುಟುಂಬಕ್ಕೆ ಸಮರ್ಪಕವಾಗಿ ಗ್ಯಾರಂಟಿ ಮುಟ್ಟಿವೆ ಎಂದರು.

ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕ ಜಾರಕಿಹೊಳಿ ಅವರ ಗೆಲುವಿಗೆ ಚಿಕ್ಕೋಡಿ–ಸದಲಗಾ ಕ್ಷೇತ್ರದಲ್ಲಿ ಐದು ಬೃಹತ್ ಕಾರ್ಯಕರ್ತರ ಸಭೆ ಮಾಡಲಾಗಿದೆ.

ಎಲ್ಲ ಸಭೆಯಲ್ಲಿಯೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ನೂರಕ್ಕೆ ನೂರರಷ್ಟು ಪ್ರಿಯಾಂಕ ಜಾರಕಿಹೊಳಿ ಗೆಲುವು ಶತಸಿದ್ಧ. ಚಿಕ್ಕೋಡಿ–ಸದಲಗಾ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು ಯಾವುದೇ ಊಹಾಪೋಹಗಳಿಗೆ ತಲೆ ಕೆಡಿಸಿಕೊಳ್ಳದೇ ಕಾಂಗ್ರೆಸ್ ಗೆಲ್ಲಿಸಲು ಪ್ರಯತ್ನ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಮುಖಂಡ ಮಲ್ಲಿಕಾರ್ಜುನ ಪಾಟೀಲ, ಚನ್ನಗೌಡ ಪಾಟೀಲ, ವಿಠ್ಠಲ ವಾಳಕೆ, ವೀರೇಂದ್ರ ಪಾಟೀಲ, ಸುರೇಶ ಬಾಡ್ಕರ, ಪ್ರಕಾಶ ರಾಚನ್ನವರ, ರಣಜೀತ ಶಿರಶೆಟ್ಟಿ, ಮಲ್ಲಪ್ಪ ಬಾಗಿ ಮುಂತಾದವರು ಇದ್ದರು.

# ಜೈಲಿನಲ್ಲಿ ಹಣಕ್ಕೆ ಬೇಡಿಕೆಯಿಟ್ಟ ಜೈಲರ್ ಅಮಾನತು

ಚಿತ್ರದುರ್ಗ: ಕರ್ತವ್ಯ ಲೋಪ ಎಸಗಿದ ಹಿನ್ನೆಲೆ ಚಿತ್ರದುರ್ಗ ಜಿಲ್ಲಾ ಬಂಧಿಖಾನೆ ಜೈಲರನ್ನು ಸಸ್ಪೆಂಡ್ ಮಾಡಲಾಗಿದೆ.

ಶ್ರೀಮಂತಗೌಡ ಪಾಟೀಲ್ ಅಮಾನತ್ತಾಗಿರುವ ಜೈಲರ್. ಕಾರಗೃಹ ಮಹಾ ನಿರ್ದೇಶಕ ಮಾಲಿನಿ ಕೃಷ್ಣಮೂರ್ತಿ ಆದೇಶ ಹೊರಡಿಸಿದ್ದಾರೆ. ಪ್ರಾಥಮಿಕ ವಿಚಾರಣೆ ನಡೆಸಿ ಅಮಾನತು ಮಾಡಿ ಆದೇಶಿಸಿದ್ದಾರೆ. ಅವರ ಆದೇಶದಂತೆ ಶ್ರೀಮಂತಗೌಡ ಪಾಟೀಲ್ ಅವರನ್ನು ಸಸ್ಪೆಂಡ್ ಮಾಡಿದ್ದಾರೆ.

ಸಂದರ್ಶನದ ವೇಳೆ ಜೈಲಿನಲ್ಲಿ ಬಂಧಿಗಳಿಗೆ ಹಣ ಬೇಡಿಕೆ ಇಟ್ಟಿರುವ ಆರೋಪ ಹಿನ್ನೆಲೆ ಶ್ರೀಮಂತಗೌಡ ಪಾಟೀಲ್ ಅಮಾನತುಗೊಳಿಸಲಾಗಿದೆ. ಜೈಲಿನಲ್ಲಿ ಗಲಾಟೆ ನಡೆದ ವೇಳೆ ಶಿಸ್ತು ಕ್ರಮ ಜರುಗಿಸಿಲ್ಲ ಎಂಬ ಆರೋಪದಡಿ ಕೂಡ ಅಮಾನತು ಮಾಡಲಾಗಿದೆ. ಜೈಲಿನಲ್ಲಿ ಕೆಲ ಆರೋಪಿಗಳು ಚಂದ್ರಪ್ಪ ಎಂಬಾತನ ಮೇಲೆ ಹಲ್ಲೆ ನಡೆಸಿದ್ದರು. ಹಲ್ಲೆ ನಡೆಸಿದವರ ವಿರುದ್ದ ಕ್ರಮ ಜರುಗಿಸಿಲ್ಲ ಎಂದು ಆರೋಪಿ ಚಂದ್ರಪ್ಪ ಆರೋಪ ಮಾಡಿದ್ದರು. ಹೀಗಾಗಿ ಈ ಪ್ರಕರಣದಲ್ಲಿ ಕತ್ಯವ್ಯಲೋಪ ಎಸಗಿರುವ ಹಿನ್ನೆಲೆ ಶ್ರೀಮಂತಗೌಡ ಪಾಟೀಲ್ ಸಸ್ಪೆಂಡ್ ಆಗಿದ್ದಾರೆ.

# ಅಂಗಡಿತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಪ್ರಾಜೆಕ್ಟಗಳಿಗೆ ಕೆಎಸ್‌ಸಿಎಸ್‌ಟಿಯಿಂದ ಧನಸಹಾಯ

ಬೆಳಗಾವಿ: ಕರ್ನಾಟಕ ರಾಜ್ಯ ವಿಜ್ಞಾನ ಮತ್ತುತಂತ್ರಜ್ಞಾನ ಮಂಡಳಿಯು (ಕೆಎಸ್‌ಸಿಎಸ್‌ಟಿ) ಬೆಳಗಾವಿ ನಗರದಅಂಗಡಿತಾಂತ್ರಿಕ ಹಾಗೂ ವ್ಯವಸ್ಥಾಪನಾ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಎಂಟು ಪ್ರೊಜೆಕ್ಟುಗಳಿಗೆ ಧನಸಹಾಯ ನೀಡಿದೆ.

ಕೆಎಸ್‌ಸಿಎಸ್‌ಟಿಯ 47ನೇ ಆವೃತ್ತಿಯ ವಿದ್ಯಾರ್ಥಿಗಳ ಯೋಜನಾ ಕಾರ್ಯಗಳಿಗೆ ಪ್ರಾಯೋಜಕತ್ವ ನೀಡುವ ಈ ಕಾರ್ಯಕ್ರಮಕ್ಕೆ ಆರ್ಟಿಫಿಸಿಯಲ್ ಇಂಟಲಿಜೆನ್ಸ ಮತ್ತುಡಾಟಾ ಸಾಯಿನ್ಸ ವಿಭಾಗದಲ್ಲಿ ಡಾ. ಧನಶ್ರೀ ಕುಲಕರ್ಣಿ ಹಾಗೂ ಪ್ರೊ. ಚೇತನ ಪಾಟೀಲ ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ಕೈಗೊಂಡಿರುವಆ್ಯನ್ ಇಂಟಿಗ್ರೇಟೆಡ್ ಸಿಸ್ಟಮ್ ಫಾರ್‌ಡಿ ಪ್ರೆಶನ್‌ಡಿ ಟೆಕ್ಶನ್, ಅನಾಲೆಸಿಸ್ ಆ್ಯಂಡ ಪ್ರೊವೈಡಿಂಗ್ ಪರ್ಸನಾಲೈಜ್ಡ ಸಪೋರ್ಟ ಪ್ರಾಜೆಕ್ಟ, ಸಿವಿಲ್ ವಿಭಾಗದ ವಿದ್ಯಾರ್ಥಿಗಳು ಡಾ. ಬಿ.ಟಿ. ಸುರೇಶ ಬಾಬು ಅವರ ಮಾರ್ಗದರ್ಶನದಲ್ಲಿ ಕೈಗೊಂಡಿರುವ ಸ್ಟಡಿಆನ್‌ಟ್ರೀಟ ಮೆಂಟ ಆಫ್‌ಟಬ್ರೈಡ ವಾಟರ ಯೂಸಿಂಗ ಬಾಕ್ಸೈಟಟೇಲಿಂಗ್ಸಆ್ಯಸ್ ಎ ಕಾಗುಲಂಟ, ಕಂಪ್ಯೂಟ್‌ರ ಸಾಯಿನ್ಸ ಇಂಜನೀಯರಿಂಗ ವಿಭಾಗದ ವಿದ್ಯಾರ್ಥಿಗಳು ಪ್ರೊ. ಗೌತಮದೇಮಟ್ಟಿ ಅವರ ಮಾರ್ಗದರ್ಶನ ದಲ್ಲಿ ಸ್ಮಾಟ್‌ಗ್ಲಾಸಸ್ ಫಾರ್ ವಿಜ್ಯುವಲಿ ಇಂಪೇರ್ಡ ಪೀಪಲ್, ಪ್ರೊ. ಸೋನಮ್ ಬಾಂದುರ್ಗೆ ಅವರ ಮಾರ್ಗದರ್ಶನದಲ್ಲಿ ಇ–ಹೆಲ್ತ ಮಾನೆಟರಿಂಗ್ ವಿಥ್‌ಡಾಯಟಆ್ಯಂಡ ಫಿಟ್‌ನೆಸ್‌ರೆಕಮೆಂಡೇಶನ್ ಯೂಸಿಂಗ ಮಷೀನ್ ಲರ್ನಿಂಗ, ಇಲೆಕ್ಟ್ರಿಕಲ್ ಮತ್ತುಇಲೆಕ್ಟ್ರಾನಿಕ್ಸ ಇಂಜನೀಯರಿಂಗ ವಿಭಾಗದ ವಿದ್ಯಾರ್ಥಿಗಳು ಪ್ರೊ. ರಾಜೇಂದ್ರಗಿವಾರಿ ಇವರ ಮಾರ್ಗದರ್ಶನದಲ್ಲಿ ಹಾರ್ನೆಸಿಂಗ್ ವಿಂಡ್‌ಎನರ್ಜಿ ಫ್ರಾಮ್ ವರ್ಟಿಕಲ್ ಆ್ಯಂಡ ಹಾರಿ ಜೊಂಟಲ್‌ಎಕ್ಸಸ್ ವಿಂಡಟರ್ಬೈನ್, ಇಲೆಕ್ಟ್ರಿಕಲ್ ಮತ್ತು ಇಲೆಕ್ಟ್ರಾನಿಕ್ಸ ಇಂಜನೀಯರಿಂಗ ವಿಭಾಗದ ವಿದ್ಯಾರ್ಥಿಗಳು ಪ್ರೊ. ಕಾಂತೇಶ ಡಿ.ಸಿ. ಅವರ ಮಾರ್ಗದರ್ಶನದಲ್ಲಿ ಎಂ ಶೇಪ ಲೋ ಕಾಸ್ಟ ಸೋಲಾರ್ ಸ್ಟೀಲ್ ಫಾರರೂರಲ್ ಆ್ಯಂಡ 'ಐಸೋಲೆಟೆಡ್ ಕಮ್ಯುನಿಟಿಸ್, ಇಲೆಕ್ಟ್ರಾನಿಕ್ಸ ಆ್ಯಂಡ ಕಮ್ಯುನಿಕೇಶನ್ ಇಂಜನೀಯರಿಂಗ ವಿಭಾಗದ ವಿದ್ಯಾರ್ಥಿಗಳು ಡಾ. ಜಿ.ಆರ್. ಉಡುಪಿ ಮತ್ತು ಪ್ರೊ. ಗುರುರಾಜ ಕುಲಕರ್ಣಿ ಅವರ ಮಾರ್ಗ ದರ್ಶನದಲ್ಲಿ ಎಂಬೆಡೆಡ್ ಬೇಸ್ಡ ಅಂಡರಗ್ರೌಂಡ ವಾಟರ ಲೋಕೇಟರ, ಇಲೆಕ್ಟ್ರಾನಿಕ್ಸ ಆ್ಯಂಡ ಕಮ್ಯುನಿಕೇಶನ್ ಇಂಜನೀಯರಿಂಗ ವಿಭಾಗದ ವಿದ್ಯಾರ್ಥಿಗಳು ಪ್ರೊ. ಶ್ರೀರಾಮ ಕೆ.ವಿ. ಅವರ ಮಾರ್ಗದರ್ಶನದಲ್ಲಿ ಆರ್ಟಿಫಿಸಿಯಲ್ ಇಂಟೆಲಿಜೆನ್ಸ ಬೇಸ್ಡ ನೈಟ್ ವಿಷನ್ ಪ್ಯಾಟ್ರೋಲಿಂಗ್ ರೋಬೋಟ – ಈ ಮೇಲಿನ ಎಲ್ಲ ಪ್ರೊಜೆಕ್ಟುಗಳಿಗೆ ಕೆಎಸ್‌ಸಿಎಸ್‌ಟಿ ಇಂದಧನ ಸಹಾಯ ದೊರಕಿದೆ.

ವಿದ್ಯಾರ್ಥಿಗಳ ಮತ್ತುಅವರ ಮಾರ್ಗದರ್ಶಕರ ಈ ಸಾಧನೆಗೆ ಸುರೇಶಅಂಗಡಿ ಶಿಕ್ಷಣ ಸಂಸ್ಥೆಯ ಕಾರ್ಯಾಧ್ಯಕ್ಷೆ ಹಾಗೂ ಸಂಸದೆ ಮಂಗಲ ಸುರೇಶಅಂಗಡಿ, ನಿರ್ದೇಶಕಿ ಸ್ಫೂರ್ತಿ ಪಾಟೀಲ, ಆಡಳಿತಾಧಿಕಾರಿ ರಾಜು ಜೋಶಿ, ಪ್ರಾಚಾರ್ಯಡಾ. ಆನಂದ ಭೀ. ದೇಶಪಾಂಡೆ, ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರು ಸೇ–ರಿಂದತೆಎಲ್ಲ ಶಿಕ್ಷಕವೃಂದ ಹಾಗೂ ಶಿಕ್ಷಕೇತರ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

# ರಾಮದುರ್ಗದಲ್ಲಿ ಕಾಂಗ್ರೆಸ್‌ಗೆ ಮುನ್ನಡೆ ಖಚಿತ: ಶಾಸಕ ಅಶೋಕ್ ಪಟ್ಟಣ



ರಾಮದುರ್ಗ: ಬಿಜೆಪಿಯವರು ಎಷ್ಟೇ ಅಬ್ಬರಿಸಿದರೂ ರಾಮದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರಿಗೆ ಮುನ್ನಡೆ ಸಿಗುವುದು ಖಚಿತ. ಕಾಂಗ್ರೆಸ್ ಅಭ್ಯರ್ಥಿ ಪರ ಕ್ಷೇತ್ರದಾದ್ಯಂತ ಉತ್ತಮ ವಾತಾವರಣ ನಿರ್ಮಾಣವಾಗಿದೆ ಎಂದು ಶಾಸಕ ಹಾಗೂ ವಿಧಾನಸಭೆಯ ಮುಖ್ಯ ಸಚೇತಕ ಅಶೋಕ್ ಪಟ್ಟಣ್ ಹೇಳಿದರು.

ರಾಮದುರ್ಗ ವಿಧಾನಸಭಾ ಕ್ಷೇತ್ರದ ಸಾಲಹಳ್ಳಿಯಲ್ಲಿ ಗುರುವಾರ ನಡೆದ ಹುಲಕುಂದ ಹಾಗೂ ಬಟಕುರ್ಕಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾಂಗ್ರೆಸ್ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಶಾಸಕರು, ರಾಮದುರ್ಗದಿಂದ 20 ರಿಂದ 25 ಸಾವಿರ ಮತಗಳು ಮುನ್ನಡೆ ಸಿಗುವುದು ಗ್ಯಾರಂಟಿ. ಕ್ಷೇತ್ರದಲ್ಲಿ ಒಗ್ಗಟಾಗಿ ಕೆಲಸ ಮಾಡಿ, ಮುನ್ನಡೆ ನೀಡೋಣ ಎಂದರು.

ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಪುತ್ರ ಎಂದು ಮೃಣಾಲ್ ಅವರನ್ನು ಕಣಕ್ಕಿಳಿಸಿಲ್ಲ. ಕಳೆದ 11 ವರ್ಷಗಳಿಂದ ಪಕ್ಷದ ಯುವ ಘಟಕದಲ್ಲಿ ಕೆಲಸ ಮಾಡಿದ್ದು, ಕ್ಷೇತ್ರದ ಜನರೊಂದಿಗೆ ಉತ್ತಮ ಒಡನಾಟ ಹೊಂದಿದ್ದಾರೆ. ಜೊತೆಗೆ ಅವರ ಸಮಾಜಮುಖಿ ಕೆಲಸಗಳನ್ನು ಗುರುತಿಸಿ ಟಿಕೆಟ್ ನೀಡಲಾಗಿದೆ. ಮೃಣಾಲ್ ಹೆಬ್ಬಾಳ್ಕರ್ ವಿದ್ಯಾವಂತನಾಗಿದ್ದು, ಕ್ಷೇತ್ರದ ಪರ ಕಾಳಜಿ ಹೊಂದಿದ್ದಾನೆ ಎಂದು ಶಾಸಕರ ಅಶೋಕ್ ಪಟ್ಟಣ್ ಹೇಳಿದರು.

**ಸಚಿವರಾಗುವ ಕನಸಿನಲ್ಲಿ ಬಿಜೆಪಿ ಅಭ್ಯರ್ಥಿಗಳು:**

ಅಭಿವೃದ್ಧಿ ಬಗ್ಗೆ ಕಿಂಚಿತ್ತೂ ಯೋಚಿಸದ ಬಿಜೆಪಿಯವರಿಗೆ ಅಧಿಕಾರ ದಾಹ ಮಾತ್ರ ನಿಂತಿಲ್ಲ. ಕೇಂದ್ರದಲ್ಲಿ ಎನ್‌ಡಿಎ ಅಧಿಕಾರಕ್ಕೆ ಬಂದರೆ ಸಚಿವರಾಗಲು ರಾಜ್ಯದಿಂದ ದೊಡ್ಡ ದಂಡೇ ರೆಡಿ ಆಗುತ್ತಿದೆ. ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಕೂಡ ಗೆದ್ದರೆ ಸಚಿವ ಆಗ್ತಿನಿ ಅಂತ ಮತ ಹೇಳುತ್ತಿದ್ದಾರೆ. ಪ್ರಹ್ಲಾದ್ ಜೋಶಿ, ಬಸವರಾ ಬೊಮ್ಮಾಯಿ, ಶೋಭಾ ಕರಂದ್ಲಾಜೆ ಸೇರಿದಂತೆ ಸ್ಪರ್ಧಿಸಿರುವ ಎಲ್ಲರೂ ಸಚಿವರಾಗುತ್ತೇವೆ ಎನ್ನುತ್ತಿದ್ದಾರೆ. ಈ ಹಿಂದೆ ಕ್ಷೇತ್ರದ ಅಭಿವೃದ್ಧಿಗೆ ಸಹಕರಿಸದ ವ್ಯಕ್ತಿ ಇಂದು ಬೆಳಗಾವಿಯಲ್ಲಿ ಮತ ಕೇಳಲು ನೈತಿಕತೆ ಇದೆಯೇ ಎಂದು ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಶ್ನಿಸಿದರು.

ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ತನ್ನದೇ ಕನಸು ಕಂಡಿರುವ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್, ನನ್ನ ಹಾಗೂ ಜಿಲ್ಲೆಯ ಶಾಸಕರ ಸಹಕಾರದೊಂದಿಗೆ ಕೆಲಸ ಮಾಡಲಿದ್ದಾನೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿ ಇರುವುದ–ರಿಂದ ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ಸಹಕಾರಿಯಾಗಲಿದೆ ಎಂದು ಸಚಿವರು ಹೇಳಿದರು.

ಈ ವೇಳೆ ಕಾಂಗ್ರೆಸ್ ಮುಖಂಡರಾದ ಪ್ರದೀಪ್ ಪಟ್ಟಣ್, ಹಾಸ್ಯ ಕಲಾವಿದ ರಾಜು ತಾಳಿಕೋಟೆ, ಕೆಪಿಸಿಸಿ ಸದಸ್ಯರಾದ ರಾಜೇಂದ್ರ ಪಾಟೀಲ್, ಸುರೇಶ್ ಪತ್ತಾಪುರ, ರಾಮದುರ್ಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಸೋಮಶೇಖರ ಶಿದ್ದಲಿಂಗಪ್ಪನವರ್, ಮುಂಬಾ ರೆಡ್ಡಿ, ಹನುಮಂತ ವಡ್ಡರ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

# ಬೆಳಗಾವಿ ಜಿಲ್ಲೆಯ 30 ಬೇರ ಫುಟ್ ಟೆಕ್ನಿಸಿಯನ್‌ಗಳಿಗೆ ತರಬೇತಿ ಕಾರ್ಯಾಗಾರ



ಗ್ರಾಮೀಣಾಭಿವೃದ್ಧಿ & ಪಂಚಾಯತ ರಾಜ ಸಂಸ್ಥೆ, ಮೈಸೂರು ಹಾಗೂ ಜಿಲ್ಲಾ ಪಂಚಾಯತ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ಹಾಗೂ ಉಡುಪಿ ಜಿಲ್ಲೆಯ 30 ಬೇರ ಫುಟ್ ಟೆಕ್ನಿಸಿಯನ್‌ಗಳಿಗೆ ವಸತಿ ಸಹಿತ 90 ದಿನಗಳ ತರಬೇತಿ ಕಾರ್ಯಾಗಾರವನ್ನು ಆಲ್ ಇಂಡಿಂ–ಯಾ ಇನ್ಸಿಟ್ಯೂಟ್ ಆಫ್ ಲೋಕಲ್ ಸೆಲ್ಫ್ ಗವರ್ನಮೆಂಟ್, ಬೆಳಗಾವಿಯಲ್ಲಿ ಆಯೋಜಿಸಲಾಗಿತು.

ಬೆಳಗಾವಿ: ಜಿಲ್ಲಾ ಪಂಚಾಯತ ಸಂಪನ್ಮೂಲ ಕೇಂದ್ರ ಮಚ್ಚೆಯಲ್ಲಿ ಏ.15 ರಿಂದ 18 ರವರೆಗೆ ನಾಲ್ಕು ದಿನಗಳ ಅವಧಿಯಲ್ಲಿ ಸಂಕ ಪಾಂಡ, ಡ್ರೈನೇಜ, ಅಡವಾನ್ಸ್ ಡಗ್ ಪಾಯಿಂಟ್ ಹಾಗೂ ಜಮೀನು ಅಭಿವೃದ್ಧಿ, ಭೂಮಿ ಸಮತಟ್ಟು ಯಾವ ರೀತಿ ಮಾಡಬೇಕು ಎಂಬುದನ್ನು ಪ್ರಾಯೋಗಿಕವಾಗಿ ನಾಲ್ಕು ತಂಡಗಳಾಗಿ ವಿಂಗಡಿಸಿ ಅವರಿಗೆ ಕೆಲಸವನ್ನು ನೀಡಲಾಯಿತು.

ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಹಾಗೂ ಅಬ್ದುಲ್ ನಜೀರ ಸಾಬ ರಾಜ್ಯ

ಸದರಿ ಈ ಕಾರ್ಯಾಗಾರದಲ್ಲಿ ಚಿಕ್ಕೋಡಿ ತಾಲೂಕು ಪಂಚಾಯತಿ ಟಿ.ಎ.ಇ ಸಲೀಂ ಮಲೀಕ ಯರನಾಳ, ಹಾಗೂ ಬೈಲಹೊಂಗಲ ತಾಲೂಕು ಪಂಚಾಯತಿಯ ತಾಂತ್ರಿಕ ಸಂಯೋಜ–ಕರು ಸುನೀಲ ಔರನಾಳ, ಹಾಗೂ ವಿಕೇಂದ್ರಿಕೃತ ತರಬೇತಿ ಸಂಯೋಜಕರು ಬಿ. ಎಚ್. ಬಜಂತ್ರಿ, ಎ.ಎನ್.ಎಸ್.ಐ.ಆರ್.ಡಿ. ಮೈಸೂರು ಇವರ ಮಾರ್ಗದರ್ಶನಲ್ಲಿ ಯಶಸ್ವಿಗೊಳಿಸಲಾಯಿತು.

# ವಿಶೇಷ ಚೇತನಳ ಕೈಹಿಡಿದು ನಡೆದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



ಬೆಳಗಾವಿ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಕಳೆದ ಎರಡು ದಿನಗಳಿಂದ ರಾಮದುರ್ಗ ವಿಧಾನಸಭಾ ಕ್ಷೇತ್ರದಾದ್ಯಂತ ಅಬ್ಬರದ ಪ್ರಚಾರ ಕೈಕೊಂಡಿದ್ದಾರೆ. ಹೋದಲೆಲ್ಲಾ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವ–ರಿಗೆ ಕ್ಷೇತ್ರದ ಜನ ಅಭೂತಪೂರ್ವ ಬೆಂಬಲ ವ್ಯಕ್ತಪಡಿಸುತಿದ್ದಾರೆ.

ರಾಮದುರ್ಗದ ಹಲಗತ್ತಿ, ಲಿಂಗದಾಳ, ಇಡಗಲ್, ಚಿಕ್ಕತಡಸಿ ಗ್ರಾಮಗಳಲ್ಲಿ ಪ್ರಚಾರ ಮುಗಿಸಿದ ಸಚಿವರು, ಹಂಪಿಹೊಳಿಗೆ ಆಗಮಿಸಿದರು. ಹಂಪಿಹೊಳಿಯಲ್ಲಿ ಸಚಿವರಿಗೆ ಅಚ್ಚರಿ ಕಾದಿತ್ತು. ಸಚಿವರಿಗೆ ವಿಶೇಷ ಚೇತನ ಯುವತಿ ರೋಷನ್ ಬೀ ಎಂಬುವರು ಹೂವು ಕೊಟ್ಟು ಸ್ವಾಗತಿಸಿದರು. ಸಚಿವರನ್ನು ಕಂಡು ಖುಷಿಗೊಂಡ ರೋಷನ್ ಬೀ, ಅವರ ಕೈಹಿಡಿದು ಪ್ರಚಾರ ನಿಗದಿಯಾಗಿದ್ದ ಸ್ಥಳದವರೆಗೂ ನಡೆದರು.

ರೋಷನ್ ಬೀ ಅಭಿಮಾನ ಕಂಡು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕೂಡ ಆಕೆಯೊಂದಿಗೆ ಮುಕ್ತವಾಗಿ ಮಾತನಾಡುತ್ತ ಸಾಗಿದರು. 'ಸಚಿವರನ್ನು ಇಷ್ಟು ದಿನ ಕೇವಲ ಟಿವಿ, ಪೇಪರ್ ಗಳಲ್ಲಿ ನೋಡುತ್ತಿದ್ದೆ. ಇವತ್ತು ಅವರನ್ನು ಹತ್ತಿರದಿಂದ ನೋಡಿ ಖುಷಿ ಆಯಿತು. ನನಗೆ ಸ್ವಂತ ಮನೆ ಇಲ್ಲ. ನನ್ನ ಅಕ್ಕ ಕೂಡ ವಿಕಲ ಚೇತನಳು, ಆಪರೇಷನ್ ಆಗಿದೆ. ನನ್ನ ಕೆಲವೊಂದು ಸಮಸ್ಯೆಗಳನ್ನು ಸಚಿವರಿಗೆ ಹೇಳಿರುವೆ. ಸಮಸ್ಯೆಗಳಿಗೆ ಪರಿಹಾರ ನೀಡುವ ಭರವಸೆ ನೀಡಿದ್ದಾರೆ ಎಂದು ರೋಷನ್ ಬೀ ಹೇಳಿ ಕೊಂಡರು.

**ಮದುವೆ ಕಾರ್ಯಕ್ರಮದಲ್ಲಿ ಭಾಗಿ:**

ಬಳಿಕ ರೋಷನ್ ಬೀ ಮನವಿ ಮೇರೆಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಸಂಬಂಧಿಕರ ಮದುವೆಯ ಆರತಕ್ಷತೆ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಜೊತೆಗೆ ರೋಷನ್ ಬೀ ತಮ್ಮ ಕುಟುಂಬ ಸದಸ್ಯರನ್ನು ಸಚಿವರಿಗೆ ಪರಿಚಯಿಸಿಕೊಟ್ಟು ಸಂಭ್ರಮಿಸಿದರು.

ವಿಕಲ ಚೇತನಳ ಜೀವನೋತ್ಸಾಹ, ಸಚಿವರ ಬಗೆಗಿನ ಪ್ರೀತಿ, ಆಕೆಯ ಕುರಿತ ಸಚಿವರ ಕಾಳಜಿ ಎಲ್ಲವನ್ನೂ ನೋಡಿದ ಅಲ್ಲಿದ್ದವರಿಗೆ ಖುಷಿಯೋ ಖುಷಿ.

# ವಿದ್ಯಾರ್ಥಿನಿ ಹತ್ಯೆ ಕೇಸ್: ಘಟನೆ ಖಂಡಿಸಿದ ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಸದಸ್ಯರಾದ ನಿರಂಜನ ಹಿರೇಮಠ ಅವರ ಪುತ್ರಿ ನೇಹಾ ಹಿರೇಮಠ ಅವರ ಹತ್ಯೆ ನಡೆದಿದ್ದು ಅತ್ಯಂತ ಖಂಡನೀಯ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಇದೊಂದು ಅತ್ಯಂತ ಹೇಯ ಕೃತ್ಯವಾಗಿದ್ದು, ನಾಗರೀಕ ಸಮಾಜ ತಲೆತಗ್ಗಿಸುವಂತಾಗಿದೆ. ಇಂಥ ಘಟನೆಗಳು ಮತ್ತೆ ಮರುಕಳಿಸಬಾರದು ಮತ್ತು ಸಮಾಜದಲ್ಲಿ ಶಾಂತಿ ಕದಡುವ ಪ್ರಯತ್ನ ಯಾರೂ ಮಾಡಬಾರದು. ಅಪರಾಧಿಗೆ ಅತ್ಯಂತ ಕಠಿಣ ಶಿಕ್ಷೆ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

ಈಗಾಗಲೇ ಆರೋಪಿಯ ಬಂಧನವಾಗಿದೆ. ಈ ಪ್ರಕರಣ ಕು–ರಿತು ಸಿಎಂ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಪರಮೇಶ್ವರ ಅವರು ಪೊಲೀಸರಿಗೆ ಸೂಕ್ತ ತನಿಖೆ ನಡೆಸಿ, ಅಪರಾಧಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ತಿಳಿಸಿದ್ದಾರೆ. ಅದ್ದರಿಂದ ಪ್ರತಿಯೊಬ್ಬರು ಶಾಂತಿ ಕಾಪಾಡಬೇಕು. ವಿದ್ಯಾರ್ಥಿನಿ ಕೊಲೆ ಪ್ರಕರಣಕ್ಕೂ ರಾಜಕೀಯಕ್ಕೂ ಸಂಬಂಧ ಸೇ–ರಿಸುವುದು ಸರಿಯಲ್ಲ. ಸುಕಾಸುಮ್ಮನೆ ಬಿಜೆಪಿಯವರು ಅನಗತ್ಯ ಆರೋಪಗಳನ್ನು ಮಾಡುತ್ತಿದ್ದಾರೆ. ಕಾನೂನು ಕೈಗೆತ್ತಿಕೊಳ್ಳುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮಗಳನ್ನು ಕೈಗೊಳ್ಳುವ ಕೆಲಸ ನಮ್ಮ ಸರ್ಕಾರ ಮಾಡಲಿದೆ ಎಂದು ತಿಳಿಸಿದ್ದಾರೆ.

# ಅರ್ಜಿ ಆಹ್ವಾನ


ಬೆಳಗಾವಿ: ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವಕ ಯುವತಿಯರಿಗೆ ಮತ್ತು ನಿರುದ್ಯೋಗಿಗಳಿಗೆ ಉದ್ಯೋಗ ತರಬೇತಿ ನೀಡುವ ಉದ್ದೇಶದಿಂದ ಬೆಳಗಾವಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ–ಉದ್ಯೋಗ ತರಬೇತಿ ಸಂಸ್ಥೆ (ಸಿಬಿಆರ್‌ಸೆಟಿ) ವತಿಯಿಂದ ಕೋಳಿ ಸಾಕಾಣಿಕೆ 10 ದಿನಗಳ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಪಡೆಯುವ ಅಭ್ಯರ್ಥಿಗಳು 18 ರಿಂದ 45 ವಯಸ್ಸಿನವರಾಗಿರಬೇಕು. ಗ್ರಾಮೀಣ ಪ್ರದೇಶದವರಿಗೆ ಮೊದಲ ಆದ್ಯತೆ ನೀಡಲಾಗುವುದು. ಬಿಪಿಎಲ್ ಅಥವಾ ಜಾಬ್ ಕಾರ್ಡ್ ಹೊಂದಿರಬೇಕು. ಅರ್ಜಿ ಸಲ್ಲಿಸಲು ಬಿಪಿಎಲ್ ಕಾರ್ಡ್, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಮೂರು ಪಾಸ್‌ಪೋರ್ಟ್ ಸೈಜ್ ಭಾವಚಿತ್ರ ಕಡ್ಡಾಯ ಇರಬೇಕು. ತರಬೇತಿ ಅವಧಿಯಲ್ಲಿ ಊಟ ಮತ್ತು ವಸತಿ ಉಚಿತವಾಗಿರುತ್ತದೆ.

ಆಸಕ್ತರು ಏ.27 ಒಳಗಾಗಿ ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಇಮೇಲ್ cbrsetibelagavi@gmail.com ಗೆ ಕಳುಹಿಸಬಹುದು. ಅರ್ಜಿಯನ್ನು **https://forms.gle/Y1hntNgHijkmga8d7** ಆನ್‌ಲೈನ್‌ನಲ್ಲಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿಯ ಕಣಬರ್ಗಿ ಇಂಡಸ್ಟ್ರಿಯಲ್ ಏರಿಯಾ, ಆಟೋ ನಗರದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ)ಯ ದೂ. ಸಂ: 0831–2440644, 8296792166, 9845750043, 8050406866, 8867388906, 9449860564 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಕೋಟಿ ಒಡೆಯ ದಿಂಗಾಲೇಶ್ವರ ಸ್ವಾಮೀಜಿಯ ಆಸ್ತಿ ವಿವರ



ಹುಬ್ಬಳ್ಳಿ: ಗದಗ ಜಿಲ್ಲೆಯ ಶಿರಹಟ್ಟಿಯ ಫಕೀರೇಶ್ವರ ಮಠದ ದಿಂಗಾಲೇಶ್ವರ ಸ್ವಾಮೀಜಿ ಧಾರವಾಡ ಲೋಕಸಭಾ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾರೆ. ಗುರುವಾರ ನಾಮಪತ್ರ ಸಲ್ಲಿಸಿರುವ ದಿಂಗಾಲೇಶ್ವರ ಸ್ವಾಮೀಜಿ 9.74 ಕೋಟಿ ರೂಪಾಯಿ ಮೌಲ್ಯದ ಆಸ್ತಿಯನ್ನು ಘೋಷಿಸಿಕೊಂಡಿದ್ದಾರೆ.

ದಿಂಗಾಲೇಶ್ವರ ಸ್ವಾಮೀಜಿ ಆಸ್ತಿಯಲ್ಲಿ 1.22 ಕೋಟಿ ರೂ. ಚರಾಸ್ತಿಯಾಗಿದ್ದರೆ, 8.52 ಕೋಟಿ ರೂ. ಸ್ಥಿರಾಸ್ತಿಯನ್ನು ಘೋಷಿಸಿದ್ದಾರೆ. ವಿವಿಧ ಕಡೆ 39.68 ಲಕ್ಷ ರೂ. ಸಾಲವನ್ನು ದಿಂಗಾಲೇಶ್ವರ ಸ್ವಾಮೀಜಿ ಹೊಂದಿದ್ದು, ಮೂರು ಪ್ರಕರಣಗಳು ಸ್ವಾಮೀಜಿ ಮೇಲೆ ಇವೆ.

ನಾಮಪತ್ರ ಅಫಿಡವಿಟ್‌ನಲ್ಲಿ ತಿಳಿಸಿರುವಂತೆ ದಿಂಗಾಲೇಶ್ವರ ಸ್ವಾಮೀಜಿ ಕೈಯಲ್ಲಿ ಸದ್ಯ 1 ಲಕ್ಷದ 25 ಸಾವಿರ ರೂ. ನಗದು ಇದೆ. ವಿವಿಧ ಬ್ಯಾಂಕ್ ಖಾತೆಗಳಲ್ಲಿ 11 ಲಕ್ಷಕ್ಕೂ ಅಧಿಕ ಹಣ ಇದೆ. ಸುಮಾರು 4.75 ಲಕ್ಷ ರೂ. ಮೌಲ್ಯದ ಶೇರುಗಳು ಹಾಗೂ ಬಾಂಡ್‌ಗಳನ್ನು ವಿವಿಧ ಸಹಕಾರಿ ಬ್ಯಾಂಕ್‌ಗಳಲ್ಲಿ ಹೊಂದಿದ್ದಾರೆ.

ಅಫಿಡವಿಟ್‌ನಲ್ಲಿ ಘೋಷಿಸಿರುವಂತೆ ಸ್ವಾಮೀಜಿ ಅವರು ಎರಡು ಟೊಯೊಟೊ ಇನೋವಾ ಕಾರು, ಒಂದು ಟ್ರಾಕ್ಟರ್ ಹಾಗೂ ಒಂದು ಬಸ್ ಅನ್ನು ಹೊಂದಿದ್ದಾರೆ. ಜೊತೆಗೆ 4.35 ಲಕ್ಷ ರೂ. ಮೌಲ್ಯದ 7 ಕೆಜಿ 820 ಗ್ರಾಂ ಬೆಳ್ಳಿ ಹೊಂದಿದ್ದು, 1,17 ಲಕ್ಷ ರೂ. ಮೌಲ್ಯದ 18.9 ಗ್ರಾಂ ಚಿನ್ನವನ್ನು ಹೊಂದಿದ್ದಾರೆ. ಈ ಮೂಲಕ ಒಟ್ಟು 1.22 ಕೋಟಿ ರೂ. ಚರಾಸ್ತಿಯನ್ನು ದಿಂಗಾಲೇಶ್ವರ ಸ್ವಾಮೀಜಿ ಘೋಷಿಸಿಕೊಂಡಿದ್ದಾರೆ.

ಸ್ಥಿರಾಸ್ತಿಯನ್ನು ಗಮನಿಸಿದರೆ, 23 ಎಕರೆ 17 ಗುಂಟೆ ಕೃಷಿ ಭೂಮಿಯನ್ನು ಹೊಂದಿದ್ದು, 19 ಕಡೆ ಕೃಷಿಯೇತರ ಭೂಮಿ ಹೊಂದಿದ್ದಾರೆ. ಜೊತೆಗೆ ಶಾಲಾ ಕಟ್ಟಡ ಕೂಡ ಇದ್ದು, ಒಟ್ಟು, 8.52 ಕೋಟಿ ರೂ. ಮೌಲ್ಯದ ಸ್ಥಿರಾಸ್ತಿಯನ್ನು ಹೊಂದಿದ್ದಾರೆ.

ದಿಂಗಾಲೇಶ್ವರ ಸ್ವಾಮೀಜಿ 39.68 ಲಕ್ಷ ರೂ. ಸಾಲವನ್ನು ಹೊಂದಿದ್ದಾರೆ. ಅದರ ಜೊತೆ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ದಿಂಗಾಲೇಶ್ವರ ಸ್ವಾಮೀಜಿ ವಿರುದ್ಧ ಮೂರು ಕ್ರಿಮಿನಲ್ ಪ್ರಕರಣಗಳು ದಾಖಲಾಗಿದ್ದು, ಮೂರು ಕೂಡ ಜಾತಿ ನಿಂದನೆ ಹಾಗೂ ಹಲ್ಲೆ ನಡೆಸಿರುವುದಕ್ಕೆ ಸಂಬಂಧಿಸಿದ್ದು ಎಂದು ನಾಮಪತ್ರ ಸಲ್ಲಿಕೆಯಲ್ಲಿ ತಿಳಿಸಲಾಗಿದೆ.

## ಸಿಎಂ ರ‍್ಯಾಲಿ ವೇಳೆ ತಪ್ಪಿಸಿಕೊಂಡ 3 ವರ್ಷದ ಹೆಣ್ಣು ಮಗು: ಪೋಷಕರ ಮಡಿಲು ಸೇರಿಸಿ ಪೊಲೀಸ್‌ರು



ಚಿಕ್ಕಬಳ್ಳಾಪುರ: ಸಿಎಂ ರ‍್ಯಾಲಿಯಲ್ಲಿ ತಪ್ಪಿ ಹೋಗಿದ್ದ ಮಗುವನ್ನು ಪೊಲೀಸ್ ಇನ್ಸ್ಪೆಕ್ಟರ್ ಪೋಷಕರಿಗೆ ಹಿಂತಿರುಗಿಸಿ ಮಾನವೀಯತೆ ಮೆರೆದ ಘಟನೆ ಚಿಕ್ಕಬಳ್ಳಾಪುರದಲ್ಲಿ ಬೆಳಕಿಗೆ ಬಂದಿದೆ. ಹೊಸಹಳ್ಳಿ ಪೊಲೀಸ್ ಸ್ಟೇಷನ್ ನ ರಾವ್ ಗಣೇಶ್ ಮಗುವನ್ನ ಪೋಷಕರ ಮಡಿಲಿಗೆ ಒಪ್ಪಿಸಿದ್ದಾರೆ.

ನಿನ್ನೆ ಚಿಕ್ಕಬಳ್ಳಾಪುರದಲ್ಲಿ ಸಿಎಂ ಸಿದ್ದರಾಮಯ್ಯನವರ ರ‍್ಯಾಲಿ ನಡೆಸಿದ್ದರು. ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚನೆಗೆ ಮಾಡಿದ್ದರು.

ಈ ವೇಳೆ ರ‍್ಯಾಲಿಯಲ್ಲಿ ಭಾಗವಹಿಸಿದ್ದ ಪೋಷಕರ ಕೈಯಿಂದ 3 ವರ್ಷದ ಹೆಣ್ಣು ಮಗು ಅಲ್ಲಾ ತಪ್ಪಿಹೋಗಿತ್ತು.

ತಪ್ಪಿ ಹೋದ ಮಗು ಹೊಸಹಳ್ಳಿ ಪೊಲೀಸ್ ಸ್ಟೇಷನ್ ನ ಇನ್ಸ್ಪೆಕ್ಟರ್ ರಾವ್ ಗಣೇಶ್ ಕಣ್ಣಿಗೆ ಬಿದ್ದಿತ್ತು. ಜನರ ನಡುವೆ ಕಣ್ಣೀರಿಡುತ್ತಿದ್ದ ಮಗುವನ್ನು ಗಣೇಶ್ ಕಂಡಿದ್ದಾರೆ. ಮಗುವಿಗೆ ಸರಿಯಾಗಿ ಮಾತು ಕೂಡ ಬರುತ್ತಿರಲಿಲ್ಲ. ತಕ್ಷಣವೇ ಮಗುವನ್ನು ಸಂತೈಸಿಕೊಂಡು ತಮ್ಮ ಬಳಿಯೇ ಇಟ್ಟುಕೊಂಡಿದ್ದಾರೆ. ಬಳಿಕ ಮಗುವಿನ ಬಳಿ ಮಾಹಿತಿ ಕಲೆ ಹಾಕಿ, ರ‍್ಯಾಲಿ ಮುಗಿದ ನಂತರ ಪೋಷಕರಿಗೆ ಒಪ್ಪಿಸಿದ್ದಾರೆ.

ಇನ್ನು ಈ ವೇಳೆಇನ್ಸ್ಪೆಕ್ಟರ್ ರಾವ್ ಗಣೇಶ್ ಗೆ ಸಿಬ್ಬಂದಿಯದ ಚಂದ್ರಶೇಖರ್ ಸಹಾಯ ಮಾಡಿದ್ದಾರೆ. ಕೊನೆಗೂ ಮರಳಿ ಮಡಿಲು ಸೋರಿದ ಮಗುವನ್ನು ಕಂಡು ಪೋಷಕರು ಸಂತಸಗೊಂಡಿದ್ದಾರೆ. ಇನ್ಸ್ಪೆಕ್ಟರ್ಗೆ ಕೃತಜ್ಞತೆ ಸಲ್ಲಿಸಿದ್ದಾರೆ.

# ಪ್ರಜಾಪ್ರಭುತ್ವದಲ್ಲಿ ಮತದಾನ ಹಾಗೂ ಚುನಾವಣೆ ಒಂದೇ ನಾಣ್ಯದ ಎರಡು ಮುಖ: ರಾಹುಲ ಶಿಂಧೆ



ಬೆಳಗಾವಿ: ಪ್ರಜಾಪ್ರಭುತ್ವದಲ್ಲಿ ಮತದಾನ ಹಾಗೂ ಚುನಾವಣೆ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ ತಾವೆಲ್ಲರೂ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ. ಸಿ.ಇ.ಓ ರಾಹುಲ ಶಿಂಧೆ ಹೇಳಿದರು.

ಚಿಕ್ಕೋಡಿ ತಾ.ಪಂ ಆವರಣದಲ್ಲಿ ಶುಕ್ರವಾರ (ಎ.19) ರಂದು ಮತದಾನ ಜಾಗೃತಿ ಕುರಿತು ಆಯೋಜಿಸಲಾಗಿದ್ದ ಎತ್ತಿನ ಬಂಡಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮೇ 7 ರಂದು ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಮತದಾನ ನಡೆಯುತ್ತಿದೆ. ಮತದಾನದ ದಿನದಂದು ಪ್ರತಿಯೊಬ್ಬರು ತಪ್ಪದೆ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಸಬೇಕು ಎಂದರು. ಮತದಾನ ಎಂಬುವದು ಸಂವಿಧಾನ ನೀಡಿದ ವರದಾನವಾಗಿದ್ದು ಇಂತಹ ಅತ್ಯಮೂಲ್ಯವಾದ ಹಕ್ಕನ್ನು ತಪ್ಪದೇ ಚಲಾಯಿಸುವುದು ಪ್ರತಿಯೊಬ್ಬ ಅರ್ಹ ಮತದಾರರ ಜವಾಬ್ದಾರಿಯಾಗಿದೆ. ಪ್ರಜಾಪ್ರಭುತ್ವ ಗಟ್ಟಿಗೊಳ್ಳಬೇಕಾದರೆ ಎಲ್ಲರೂ ತಪ್ಪದೇ ಮತ ಚಲಾಯಿಸಬೇಕು. ಸ್ವಯಂ ಪ್ರೇರಣೆಯಿಂದ ಅರ್ಹ ಮತದಾರರು ಮತ ಚಲಾಯಿಸುವದರ ಜೊತೆಗೆ ತಮ್ಮ ನೆರೆಹೊರೆಯವರು ಸಹ ತಪ್ಪದೇ ಮತದಾನ ಮಾಡುವಂತೆ ಜಾಗೃತಿ ಮೂಡಿಸಲು ಮುಂದಾಗುವಂತೆ ಜಿ.ಪಂ.ಸಿ.ಇ.ಓ. ರಾಹುಲ ಶಿಂಧೆ ಕರೇ ನೀಡಿದರು.

ಜಾಥಾ ಕಾರ್ಯಕ್ರಮವು ತಾಲ್ಲೂಕ ಪಂಚಾಯತ ಕಚೇ–ರಿಯಿಂದ ಪ್ರಾರಂಭವಾಗಿ ಬಸವೇಶ್ವರ ಸರ್ಕಲ್ ಇಂದ ಬಸ ನಿಲ್ದಾಣ ಸರ್ಕಲ ಸುತ್ತಾಡಿ ತಾಲ್ಲೂಕ ಪಂಚಾಯತಿ ಮುಂದೆ ಕಾರ್ಯಕ್ರಮ ಮುಕ್ತಾಯಗೊಳಿಸಲಾಯಿತು. ಚಿಕ್ಕೋಡಿ ತಾಲ್ಲುಕಿನ ಸುತ್ತಮುತ್ತಲಿನ ರೈತರು ಚಕ್ಕಡಿ ಬಂಡೆಯೊಂದಿಗೆ ಭಾಗಿಯಾಗಿದ್ದರು. ಅಲ್ಲದೇ ಸಾಂಪ್ರದಾಯಿಕ ಉಡ–ಗೆ ಯೋಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯಕರ್ತರು, ಎಸ್.ಎಚ್.ಜಿ ಸದಸ್ಯರು, ತಾಲ್ಲೂಕಾ ಪಂಚಾಯತ ಸಿಬ್ಬಂದಿ, ಪುರಸಭೆ ಸಿಬ್ಬಂದಿಗಳು ಭಾಗಿ ರಸ್ತೆ ಉದ್ದಕ್ಕು ಚುನಾವಣೆ ಘೋಷಣೆ ಕೂಗುತ್ತಾ, ಬಿದಿ ವ್ಯಾಪಾರಿಗಳಿಗೆ ಕರ ಪತ್ರವನ್ನು ಹಂಚುತ್ತಾ ಮತದಾನದ ಕು–ರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಚಿಕ್ಕೋಡಿ ಉಪವಿಭಾಗಾಧಿಕಾರಿ ಮೆಹಬೂಬಿ, ಜಿ.ಪಂ ಯೋಜನಾ ನಿರ್ದೇಶಕ ಡಾ: ಎಮ್ ಕೃಷ್ಣರಾಜು, ಚಿಕ್ಕೋಡಿ ತಹಶೀಲ್ದಾರ ಚಿದಂಬರ ಕುಲಕರ್ಣಿ, ಜಿ.ಪಂ ಲೆಕ್ಕಾಧಿಕಾರಿ ಗಂಗಾ ಹಿರೇಮಠ, ಚಿಕ್ಕೋಡಿ ತಾ.ಪಂ.ಇ.ಓ.ಜಗದೀಶ ಪೂಜಾರ ಸೇರಿದಂತೆ ವಿವಿಧ ಇಲಾಖೆ ಪುರಸಭೆಯ ಮುಖ್ಯಾಧಿಕಾರಿ ಮಹಾಂತೇಶ ನಿಡವಣಿ ಹಾಗೂ ವಿವಿಧ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತ–ರಿದ್ದರು.

# ಪರಿಸರ ಸಾರ್ವಜನಿಕ ಆಲಿಕೆ ಸಭೆ ಮುಂದೂಡಿಕೆ

ಬೆಳಗಾವಿ: ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಆರ್. ಎಸ್. ಪಾಟೀಲ್ ಇವರು ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಯಡ್ರಾಮಿ ಗ್ರಾಮದ ಸರ್ವೆ ನಂಬರ್ 64/2ಅ ಒಟ್ಟು 0.668 ಹೆಕ್ಟೇರ್ ಪ್ರದೇಶದಲ್ಲಿ ವಾರ್ಷಿಕ 32,381 ಟನ್ ಕಟ್ಟಡ ಕಲ್ಲು ಗಣಿಗಾರಿಕೆ ಘಟಕ ಸ್ಥಾಪಿಸಲು ಉದ್ದೇಶಿಸಿದೆ. ಸದರಿ ಏ.15 ರಂದು ನಡೆಯಬೇಕಿದ ಕೈಗಾರಿಕೆ ಆಲಿಕೆ ಸಭೆಯು ಮುಂದೂಡಲಾಗಿದೆ.

ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ಇವರು ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಸಂಕೋನಟ್ಟಿ ಗ್ರಾಮದ ಸರ್ವೆ ನಂಬರ್ 1141, 1142, 1143, 1136, 1137, 225 ಮತ್ತು 226, ಹಾಲಿ ಇರುವ ಸಕ್ಕರೆ ಘಟಕದ ಆವರಣದಲ್ಲಿ ಎಥನಾಲ್ ಉತ್ಪಾಧಿಸಲು 150 ಕೆಎಲ್‌ಪಿಡಿ ಸಾಮರ್ಥ್ಯದ ಡಿಸ್ಟಿಲರಿಯನ್ನು ಸ್ಥಾಪಿಸುವುದು ಹಾಗೂ 2.5 ಮೆಗಾವ್ಯಾಟ್ ಸಾಮರ್ಥ್ಯ ಸಹ ವಿದ್ಯುತ್ ಘಟಕನ್ನು ಸ್ಥಾಪಿಸಲು ಉದ್ದೇಶಿಸಿದೆ.

ಸದರಿ ಕೈಗಾರಿಕ ಆಲಿಕೆ ಸಭೆ ಏ.17 ರಂದು ನಡೆತಬೇಕಿದ ಸಭೆ ಮುಂದೂಡಲಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರನ ಮಂಡಳಿಯ ಪರಿಸರ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089